# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ

**ಸುಭಾಷಿತ:**
ನ್ಯಾಯಯುತವಾಗಿ ಧರ್ಮಮಾರ್ಗದಲ್ಲಿ ನಡೆಯುವ
ವ್ಯಕ್ತಿಯ ಸುಪ್ತ ಮನಸ್ಸು ಶಾಂತವಾಗಿರುತ್ತದೆ.
ಆ ವ್ಯಕ್ತಿ ನೆಮ್ಮದಿಯ ಬದುಕನ್ನು ಕಾಣುತ್ತಾನೆ..
ಅಧರ್ಮದ ದಾರಿಯಲ್ಲಿ ನಡೆದೂ, ಸನ್ಮಾನಕ್ಕೆ
ಒಳಗಾಗುವವನ ಮನಸ್ಸು ಗೊಂದಲಕ್ಕೀಡಾಗುತ್ತದೆ
ಅವನು ಸುಖಮಯ ಜೀವನ ನಡೆಸಲು ಸಾಧ್ಯವಿಲ್ಲ..
ಅನೇಕ ಪಾಪಕರ್ಮಗಳನ್ನು ಹೊತ್ತುಕೊಂಡು
ಸೃಷ್ಟಿಯಲ್ಲಿ ಜನಿಸಿದರೂ, ಆತನ ನಡತೆಯಿಂದ
ಮತ್ತು ಆತ ಮಾಡುವ ಉತ್ತಮ ಕಾರ್ಯಗಳಿಂದ
ಆತನ ಪಾಪ ಪುಣ್ಯಗಳನ್ನು ಅಳೆಯಲಾಗುತ್ತದೆ..
**ಭಗವಾನ್ ಶ್ರೀಕೃಷ್ಣ**

REGD NO: 1327299/KARKAN/2018/26532 www.karavalitharangini.com KARAVALI THARANGINI KANNADA Weekly Mangaluru ದಿನಾಂಕ: 27-12-2024 to 02-01-2025 ಬೆಲೆ: 7-00 ಸಂಪುಟ–4 ಸಂಚಿಕೆ–27 ಪುಟಗಳು–6

ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ
www.karavalitharangini.com
ಕರಾವಳಿ ತರಂಗಿಣಿ
ಮಂಗಳೂರು

2025
ಹೊಸ ವರ್ಷದ ಶುಭಾಶಯಗಳು
ಕರಾವಳಿ ತರಂಗಿಣಿ
ಮಂಗಳೂರು



ರಜೆ ಬಂತೆಂದರೆ ದಕ್ಷಿಣ ಕನ್ನಡದ ದೇವಸ್ಥಾನಗಳಿಗೆ ಬೇಟಿ ಕೊಡುವ ಒಂದು ವರ್ಗವಿದ್ದರೆ, ಇಲ್ಲಿನ ಕಡಲ ಕಿನಾರೆಗಳಲ್ಲಿ ಮಿಂದೆದ್ದು ಖುಷಿ ಪಡುವ ಇನ್ನೊಂದು ವರ್ಗದ ಪ್ರವಾಸಿಗರು ಕೂಡ ಕಡಲ ನಗರಿಗೆ ಬರುವುದನ್ನು ನೋಡಿದ್ದೇವೆ. ಇವೆರಡರ ನಡುವೆ ಇತ್ತೀಚಿನ ದಿನಗಳಲ್ಲಿ ಇಲ್ಲಿನ ಸಂಸ್ಕೃತಿಯ ಸಂಕೇತವಾದ, ಬೂತದ ಕೋಲ, ಯಕ್ಷಗಾನ, ಕಂಬಳದಂತಹ ಆಚರಣೆಗಳಿಗೆ ಆಕರ್ಷಿತರಾದ ಇನ್ನೊಂದು ವರ್ಗವೂ ಕಾಣಸಿಗುತ್ತದೆ. ಕಂಬಳ ಪ್ರೀಯರಿಗೆ ಈ ವಾರಾಂತ್ಯದಲ್ಲಿ ರಸದೌತಣ ನೀಡಲು ಸಿದ್ದವಾಗಿದೆ ಸಂಸದ ಬ್ರಿಜೇಶ್ ಚೌಟ ನೇತೃತ್ವದ "ಮಂಗಳೂರು ಕಂಬಳ". ಈ ವಾರಾಂತ್ಯದಲ್ಲಿ ಕಡಲ ನಗರಿಗೆ ಬೇಟಿ ನೀಡುವ ಪ್ರವಾಸಿಗರೇ ತುಳು ನಾಡಿನ ಕಂಬಳದ ವೈಭವ ಸವಿಯಲು ಮರೆಯದಿರಿ.

## ಸಮಾಜಕ್ಕೆ ನೆರವು ನೀಡುವಂತಾಗಬೇಕು–ಡಾ.ಕೆ.ಪ್ರಕಾಶ್ ಶೆಟ್ಟಿ



**ಮಂಗಳೂರು:** ಇಂದು ನೆರವು ಪಡೆದವರು ಈ ಕಾರ್ಯಕ್ರಮದಿಂದ ಸ್ಫೂರ್ತಿ ಪಡೆದು ಮುಂದೊಂದು ದಿನ ಸಮಾಜಕ್ಕೆ ತಮ್ಮಿಂದಾದ ನೆರವನ್ನು ನೀಡಬೇಕು ಎಂದು ಎಂ ಆರ್ ಜಿ ಗ್ರೂಪ್‌ನ ಅಧ್ಯಕ್ಷ ಡಾ.ಕೆ.ಪ್ರಕಾಶ್ ಶೆಟ್ಟಿ ಅಭಿಪ್ರಾಯ ಪಟ್ಟರು. ಅವರು ಆಶಾ ಪ್ರಕಾಶ್ ಶೆಟ್ಟಿ ಸಹಾಯ ಹಸ್ತ ಯೋಜನೆಯ "ನೆರವು" ಸಹಾಯ ಹಸ್ತ ಪ್ರದಾನ ಕಾರ್ಯಕ್ರಮದಲ್ಲಿ ಮಾತಾನಾಡಿ, "ನನ್ನ 60ನೇ ವರ್ಷದ ಹುಟ್ಟು ಹಬ್ಬದ ಸಂದರ್ಭದಲ್ಲಿ ಸಮಾಜಕ್ಕೆ ನನ್ನಿಂದ ಕಿಂಚಿತ್ತು ನೆರವು ನೀಡುವ ಉದ್ದೇಶದಿಂದ ಈ ಕಾರ್ಯಕ್ರಮಕ್ಕೆ ಚಾಲನೆ **3ನೇ ಪುಟಕ್ಕೆ**

## ಗೋವಿಂದು ಅವರು ಎಂಎಲ್‌ಸಿ ಆಗಬೇಕು

### ಚಿತ್ರಕರ್ಮಿಗಳ ಆಗ್ರಹ..



**ಬೆಂಗಳೂರು:** ಸಾ ರಾ ಗೋವಿಂದು ಅವರು ಎಂಎಲ್‌ಸಿ ಆಗಿ ಸಚಿವರಾದರೆ ಚಿತ್ರರಂಗ ಅಭಿವೃದ್ಧಿಯನ್ನು ಕಾಣಬಹುದು ಎಂಬುದು ಚಿತ್ರರಂಗದ ಕೆಲವು ಚಿತ್ರಕರ್ಮಿಗಳ ಬೇಡಿಕೆ ಕೂಡ. ಅದಕ್ಕೆ ಕಾರಣ ಸಾ ರಾ ಗೋವಿಂದು ಅವರ ಎಡಬಿಡದ ಹೋರಾಟ, ಭಾಷಾ ಪ್ರೇಮ, ಚಿತ್ರರಂಗದ ಮೇಲೆ ಅವರಿಗಿರುವ ಒಲವು. ಕಳೆದ ವಾರ ಮಂಡ್ಯದಲ್ಲಿ ಕನ್ನಡ ಸಾಹಿತ್ಯ ಸಮ್ಮೇಳನ ನಡೆದ ಸಂದರ್ಭಲ್ಲಿ ಕನ್ನಡಕ್ಕಾಗಿ ಅಥವಾ ಸಾಹಿತ್ಯವಾಗಿ ಭಾಷಣ ಮಾಡುವುದು ಬಿಟ್ಟು ಕೆಲವು ಗಣ್ಯರು ಬೇರೆ ಬೇರೆ ವಿಷಯಗಳನ್ನೇ ಪ್ರಸ್ತಾಪ ಮಾಡಿ ಭಾಷಣ ಮಾಡುತ್ತಿದ್ದರು. ಆದರೆ ಅಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿದ ಸಾರಾ ಗೋವಿಂದು ಅವರು ಮಾತಾಡುತ್ತಾ ಕನ್ನಡ ಭಾಷೆ, ಸಾಹಿತ್ಯದ ಬಗ್ಗೆ **3ನೇ ಪುಟಕ್ಕೆ**

## ಹಿಂದುಳಿದ ಸಮುದಾಯಕ್ಕೆ ಅನ್ಯಾಯ –ಶಾಸಕ ಕಾಮತ್



**ಮಂಗಳೂರು:** ರಾಜ್ಯದಲ್ಲಿ ಸಾಮಾಜಿಕ, ಆರ್ಥಿಕ ಹಾಗೂ ರಾಜಕೀಯವಾಗಿ ಹಿಂದುಳಿದ ವರ್ಗಗಳ ಸಮುದಾಯದ ಜನರ ಕಲ್ಯಾಣ, ಸಬಲೀಕರಣಕ್ಕಾಗಿ ನಾನಾ ಸರಕಾರಗಳು ಪ್ರತ್ಯೇಕ ಅಭಿವೃದ್ಧಿ ನಿಗಮಗಳನ್ನು ಸ್ಥಾಪಿಸುತ್ತಾ ಬಂದಿವೆ. ಅದರಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ವಿವಿಧ ನಿಗಮಗಳು ಕಾರ್ಯ ನಿರ್ವಹಿಸುತ್ತಿವೆ. ಈ ಹಿಂದೆ ಅಧಿಕಾರದಲ್ಲಿದ್ದ ಬಿಜೆಪಿ ಸರ್ಕಾರ ಹಿಂದುಳಿದ ವರ್ಗಗಳ ಅಭಿವೃದ್ಧಿಗಾಗಿ 1,000 ಕೋಟಿ ರೂ.ಗೂ ಹೆಚ್ಚು ಅನುದಾನವನ್ನು ವಿವಿಧ ನಿಗಮಗಳಿಗೆ ಬಿಡುಗಡೆ **3ನೇ ಪುಟಕ್ಕೆ**









## ಗೋವಿಂದು ಅವರು ಎಂಎಲ್‌ಸಿ ಆಗಬೇಕು ಚಿತ್ರಕರ್ಮಿಗಳ ಆಗ್ರಹ..

ಒಂದನೇ ಪುಟದಿಂದ......

ಸರಕಾರ ವಿಶೇಷ ಕಾಳಜಿ ವಹಿಸಬೇಕು ಮತ್ತು ಕರ್ನಾಟಕದ ಎಲ್ಲಾ ಇಲಾಖೆಗಳಲ್ಲಿ ಕನ್ನಡದವರಿಗೆ ಕೆಲಸ ನೀಡಬೇಕೆಂದು ಮುಖ್ಯಮಂತ್ರಿಗಳಿಗೆ ಮನವಿ ಮಾಡಿದರು. ಈ ಸಂದರ್ಭದಲ್ಲಿ ಕೂಡ ಕನ್ನಡದ ಮೇಲಿನ ಅಭಿಮಾನವನ್ನು ವ್ಯಕ್ತಪಡಿಸಿದ ಸಾ ರಾ ಗೋವಿಂದು ಪಕ್ಕಾ ಕನ್ನಡ ಹೋರಾಟಗಾರ ಎಂಬುದು ಮತ್ತೊಮ್ಮೆ ಸಾಬೀತಾಯಿತು. ಅಣ್ಣಾವ್ರ ಒಡನಾಟದಲ್ಲಿರುವಾಗಲೇ ಕನ್ನಡ ಭಾಷೆ ಮತ್ತು ಕನ್ನಡ ಸಿನಿಮಾಗಳ ಬಗ್ಗೆ ಹೋರಾಟ ಮಾಡುತ್ತಲೇ ಬಂದವರು ಸಾ ರಾ ಗೋವಿಂದು. ಕನ್ನಡ ಚಿತ್ರರಂಗದ ಉಳಿವಿಗಾಗಿ ಇವರ ಪರಿಶ್ರಮ ಹೆಚ್ಚಿನದ್ದಾಗಿದೆ. ಇವತ್ತಿಗೂ ಕನ್ನಡ ಚಿತ್ರರಂಗದ ಬಗ್ಗೆ ಅಪಾರ ಕಾಳಜಿ ಇಟ್ಟಿರುವ ಸಾ ರಾ ಗೋವಿಂದು ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾಗಬೇಕು ಮತ್ತು ಕಲಾವಿದರ ಖೋಟಾದಡಿ ಸಚಿವರಾಗಬೇಕೆಂಬುದು ಚಿತ್ರರಂಗದ ಮಹನೀಯರ ಬೇಡಿಕೆಯಾಗಿದೆ. ಈ ಬೇಡಿಕೆಯನ್ನು ಕರ್ನಾಟಕ ಸರಕಾರ ನೆರವೇರಿಸಿದಲ್ಲಿ ಕನ್ನಡ ಚಿತ್ರರಂಗದ ಅಭಿವೃದ್ಧಿಗೆ ಸಹಕಾರಿಯಾಗಲಿದೆ. ಬೇರೆಯಾರಿಗೋ ಈ ಅವಕಾಶ ಸಿಕ್ಕಿದರೆ ಚಿತ್ರರಂಗಕ್ಕೆ ಒಳಿತಾಗುವುದು ಕಷ್ಟ ಸಾಧ್ಯವಾಗಿದೆ. ಚಿತ್ರರಂಗದ ಸಂಪೂರ್ಣ ನಾಡಿಮಿಡಿತ ಬಲ್ಲವರಾದ ಸಾ ರಾ ಗೋವಿಂದು ಅವರಿಗೆ ಸರಕಾರ ಅವಕಾಶ ನೀಡಲೇಬೇಕು. ಸಾ ರಾ ಗೋವಿಂದು ಅವರು ಕನ್ನಡ ಚಿತ್ರರಂಗದಲ್ಲಿ ಪಳಗಿದಷ್ಟು ವರ್ಷ ಬೇರೆಯಾರಾದರೂ ಪಳಗಿದ್ದರೆ ಅವರ ಖಜಾನೆ ತುಂಬುತ್ತಾ ಹೋಗುತ್ತಿತ್ತು. ಆದರೆ ಸಾ ರಾ ಗೋವಿಂದು ಅವರು ಇದಕ್ಕೆಯಾವುದಕ್ಕೂ ಆಸೆ ಪಡದೆ ಕನ್ನಡ ಭಾಷೆ ಮತ್ತು ಕನ್ನಡ ಚಿತ್ರರಂಗದ ಸೇವೆ ಮಾಡುತ್ತಾ ಬಂದವರು. ಇವರ ಅನುಭವ, ನಿಸ್ವಾರ್ಥವಾದ ಸೇವೆ ಹಾಗೂ ನಮ್ಮ ಭಾಷೆಗಾಗಿ, ನಮ್ಮ ಸಿನಿಮಾಗಳಿಗಾಗಿ ಮಾಡಿದ ಹೋರಾಟವನ್ನು ಪರಿಗಣಿಸಿ, ಚಿತ್ರರಂಗದ ಉಳಿವು ಮತ್ತು ಅಭಿವೃದ್ಧಿಗಾಗಿ ಸರಕಾರ ಒಂದು ಒಳ್ಳೆಯ ನಿರ್ಧಾರವನ್ನು ತೆಗೆದುಕೊಂಡು ಶ್ರೀ ಸಾ ರಾಗೋವಿಂದು ಅವರಿಗೆ ಅವಕಾಶ ನೀಡಿದರೆ ಚಿತ್ರರಂಗಕ್ಕೆ ನ್ಯಾಯ ಸಿಗುತ್ತದೆ ಎನ್ನುವುದು ಚಿತ್ರರಂಗದ ಗಣ್ಯರ ಆಶಯವಾಗಿದೆ.

## ಸಮಾಜಕ್ಕೆ ನೆರವು ನೀಡುವಂತಾಗಬೇಕು–ಡಾ.ಕೆ.ಪ್ರಕಾಶ್ ಶೆಟ್ಟಿ

ಒಂದನೇ ಪುಟದಿಂದ......

ನೀಡಲಾಯಿತು. ಅಂದಿನಿಂದ ಸತತವಾಗಿ ಈ ಕಾರ್ಯಕ್ರಮ ನಡೆಸಿಕೊಂಡು ಬರಲಾಗುತ್ತಿದೆ. ಇಂದು ನನ್ನ ಬಾಳಿನಲ್ಲಿ ಅತ್ಯಂತ ಖುಷಿಯ ದಿನ. ನನ್ನ ಈ ಕಾರ್ಯಕ್ಕೆ ನನ್ನ ಪತ್ನಿ ಮಗ ಸೊಸೆ ಸಹಿತ ಅಕ್ಕ ತಂಗಿಯರು, ಅಣ್ಣ ಅತ್ತಿಗೆ ಸೇರಿ ಕುಟುಂಬ ಸದಸ್ಯರೆಲ್ಲಾ ಸಹಕಾರ ನೀಡುತ್ತಿದ್ದಾರೆ. ನನ್ನ ತಂಗಿ ಮಗನ ಜೊತೆ 50 ಜನರ ಯುವತಂಡ ಈ ಕಾರ್ಯಕ್ರಮಕ್ಕೆ ದುಡಿಯುತ್ತಿದೆ. ಮೊದಲ ವರ್ಷದಲ್ಲಿ 1 ಕೋಟಿ 25 ಲಕ್ಷರೂ. ನೆರವು ನೀಡಿದ್ದು ಅದು ಇಂದು 6 ಕೋಟಿ ರೂ. ಗಡಿಯನ್ನು ದಾಟಿದೆ. ಇಂದು ಇಂತಹ ಕಾರ್ಯಕ್ರಮ, ಇಂದು ಸಹಾಯ ಪಡೆದ ಕೈಗಳಿಗೆ ಸ್ಫೂರ್ತಿಯಾಗಬೇಕು. ಮುಂದೊಂದು ದಿನ ಅವರು ಕೂಡಾ ಸಮಾಜದಲ್ಲಿ ಒಂದಷ್ಟು ಮಂದಿಗೆ ನೆರವು ನೀಡಲು ಮುಂದೆ ಬರಬೇಕು. ಕಷ್ಟ ಎಲ್ಲರಿಗೂ ಬರುತ್ತದೆ. ಆದರೆ ಧೃತಿಗೆಡದೆ ಅದನ್ನು ಎದುರಿಸುವ ಛಲ ಬೆಳೆಸಿಕೊಳ್ಳಬೇಕು. ವಿದ್ಯಾರ್ಥಿಗಳು ನಿಮ್ಮ ತಂದೆ ತಾಯಿ ಗೌರವ ಪಡುವಂತೆ ಸಾಧನೆ ಮಾಡಿ ದೇಶದಲ್ಲಿ ಗುರುತಿಸುವಂತಾಗಬೇಕು" ಎಂದರು.

## ಹಿಂದುಳಿದ ಸಮುದಾಯಕ್ಕೆ ಅನ್ಯಾಯ– ಶಾಸಕ ಕಾಮತ್

ಒಂದನೇ ಪುಟದಿಂದ......

ಮಾಡಿತ್ತು. ಆದರೆ ರಾಜ್ಯದಲ್ಲಿ ನೂತನ ಕಾಂಗ್ರೆಸ್ ಸರ್ಕಾರ ಅಸ್ತಿತ್ವಕ್ಕೆ ಬಂದ ನಂತರ ಹೊಸ ಅನುದಾನವನ್ನು ನೀಡುವುದು ಬಿಡಿ, ಬಿಜೆಪಿ ಸರ್ಕಾರದ ಅವಧಿಯಲ್ಲಿ ಬಿಡುಗಡೆಗೊಳಿಸಲಾಗಿದ್ದ ಕೋಟ್ಯಾಂತರ ರೂಪಾಯಿ ಅನುದಾನಗಳನ್ನೂ ಸಹ ರದ್ದುಪಡಿಸುವ ಆದೇಶ ಹೊರಡಿಸಿರುವುದು ಅತ್ಯಂತ ಖಂಡನೀಯ. ಇದು ರಾಜ್ಯದಲ್ಲಿ ಹಿಂದುಳಿದ ವರ್ಗದವರನ್ನು ಮುನ್ನಲೆಗೆ ಬರಲು ಬಿಡದೇ ಹಿಂದುಳಿದವರಾಗಿಯೇ ಉಳಿಸುವ ಷಡ್ಯಂತ್ರವಾಗಿದ್ದು ಅಹಿಂದ ಹೆಸರಿನಲ್ಲಿ ಅಧಿಕಾರಕ್ಕೆ ಬಂದು ಅಹಿಂದ ವರ್ಗಕ್ಕೇ ಅನ್ಯಾಯ ಮಾಡುತ್ತಿರುವುದು ಎಷ್ಟು ಸರಿ?, ಹಿಂದಿನ ಬಿಜೆಪಿ ಸರ್ಕಾರ ಹಿಂದುಳಿದ ವರ್ಗಗಳ ಕಾಮಗಾರಿಗಳಿಗೆ ನೀಡಲಾಗಿದ್ದ ಅನುದಾನ ರಾಜ್ಯ ಸರ್ಕಾರ ರದ್ದುಪಡಿಸಿದೆ. ಎಂದು ಶಾಸಕ ವೇದವ್ಯಾಸ ಕಾಮತ್ ಹೇಳಿದರು.

# ಡಿಪ್ಲೋಮಾ ಲ್ಯಾಟರಲ್ ಎಂಟ್ರಿ ಪ್ರವೇಶ : ಅರ್ಜಿ ಆಹ್ವಾನ

ಮಂಗಳೂರು – ಮಂಗಳೂರಿನ ಕರ್ನಾಟಕ ಸರ್ಕಾರಿ ಪಾಲಿಟೆಕ್ನಿಕ್‌ನಲ್ಲಿ 2024–25ನೇ ಸಾಲಿನ ಅರೆಕಾಲಿಕ (ಪಾರ್ಟ್ ಟೈಮ್) ದ್ವಿತೀಯ ವರ್ಷದ ಲ್ಯಾಟರಲ್ ಎಂಟ್ರಿ ಡಿಪ್ಲೋಮಾ ಪ್ರವೇಶಕ್ಕೆ ಮೆಕ್ಯಾನಿಕಲ್ ಇಂಜಿನಿಯರಿಂಗ್ ಹಾಗೂ ಎಲೆಕ್ಟ್ರಿಕಲ್ ಅಂಡ್ ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಕೋರ್ಸ್‌ಗಳಿಗೆ ಅರ್ಜಿ ಆಹ್ವಾನಿಸಲಾಗಿದೆ. ಸಂಬಂಧಪಟ್ಟ ವಿಷಯದಲ್ಲಿ ಎರಡು ವರ್ಷಗಳ ತಾಂತ್ರಿಕ ಸೇವಾನುಭವ ಹೊಂದಿರುವ ಹಾಗೂ ಎಸ್.ಎಸ್.ಎಲ್.ಸಿ ತೇರ್ಗಡೆ ಹೊಂದಿದ ನಂತರ ಯಾವುದೇ ಅವಧಿಯಲ್ಲಿ ಎರಡು ವರ್ಷಗಳ ಐ.ಟಿ.ಐ ಕೋರ್ಸ್‌ನ್ನು/ದ್ವಿತೀಯ ಪಿ.ಯು.ಸಿ ವಿಜ್ಞಾನ/ತಾಂತ್ರಿಕ ವಿಷಯಗಳಲ್ಲಿ ಕರ್ನಾಟಕದಲ್ಲಿ ಅಧ್ಯಯನ ಮಾಡಿ ಉತ್ತೀರ್ಣರಾಗಿರುವ ಅರ್ಹ ಆಸಕ್ತ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಡಿಸೆಂಬರ್ 31 ಕೊನೆಯ ದಿನ.

# ಶಿಶಿಕ್ಷು ತರಬೇತಿ : ಅರ್ಜಿ ಆಹ್ವಾನ

ಮಂಗಳೂರು – ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ಮಂಗಳೂರು ವಿಭಾಗದಲ್ಲಿ ಶಿಶಿಕ್ಷು ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಎಸ್.ಎಸ್.ಎಲ್.ಸಿ ಅಥವಾ ಐ.ಟಿ.ಐ ವಿದ್ಯಾರ್ಹತೆಯಲ್ಲಿ ಮೆಕ್ಯಾನಿಕ್ ಡಿಸೇಲ್, ಎಲೆಕ್ಟ್ರಿಷಿಯನ್, ಮೆಷಿನಿಷ್ಟ್, ಎಲೆಕ್ಟ್ರೋನಿಕ್ಸ್ ಮೆಕ್ಯಾನಿಕ್, ವೆಲ್ಡರ್, ಮೆಕ್ಯಾನಿಕ್ ಮೋಟರ್ ವೆಹಿಕಲ್, ಪ್ರೋಗ್ರಾಮಿಂಗ್ & ಸಿಸ್ಟಮ್ ಎಡ್ಮಿನಿಸ್ಟ್ರೇಟಿವ್ ಎಸಿಸ್ಟೆಂಟ್ ವೃತ್ತಿಗಳಲ್ಲಿ ತೇರ್ಗಡೆಯಾದ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜನವರಿ 11 ಕೊನೆಯ ದಿನ.

# ಜವಳಿ ಘಟಕಗಳ ಸ್ಥಾಪನೆಗೆ ಅರ್ಜಿ ಆಹ್ವಾನ

ಶಿವಮೊಗ್ಗ : ಕೈಮಗ್ಗ ಮತ್ತು ಜವಳಿ ಇಲಾಖೆಯು ನೇಕಾರರ ವಿಶೇಷ ಪ್ಯಾಕೇಜ್ ಯೋಜನೆ ಎಸ್‌ಸಿಎಸ್‌ಪಿ/ಟಿಎಸ್‌ಪಿ ಯೋಜನೆಯಡಿ ಜವಳಿ ಕ್ಷೇತ್ರಕ್ಕೆ ಸಂಬಂಧಿಸಿದಂತೆ ಸಣ್ಣ ಮತ್ತು ಅತಿಸಣ್ಣ (ಎಸ್‌ಎಂಇ) ಘಟಕಗಳ ಸ್ಥಾಪನೆಗೆ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದ ಉದ್ಯಮಿದಾರರು ಹೊಸದಾಗಿ ಜವಳಿ ಘಟಕ ಸ್ಥಾಪಿಸಲು ಅರ್ಜಿ ಆಹ್ವಾನಿಸಿದೆ. ಹೆಚ್ಚಿನ ಮಾಹಿತಿಗಾಗಿ ದೂ.ಸಂ.:08182-223405 ನ್ನು ಸಂಪರ್ಕಿಸುವುದು.

# ಅರ್ಜಿ ಆಹ್ವಾನ ; ಅವಧಿ ವಿಸ್ತರಣೆ

ಶಿವಮೊಗ್ಗ: ಕೇಂದ್ರೀಯ ಸೈನಿಕ ಮಂಡಳಿಯು ಭಾರತೀಯ ಸೇನೆಯ ಜೆ.ಸಿ.ಓ ರ್‍ಯಾಂಕ್‌ವರೆಗಿನ ಅಥವಾ ವಾಯು ಸೇನೆ, ನೌಕಾ ಸೇನೆಯ ತತ್ಸಮಾನ ರ್‍ಯಾಂಕ್‌ವರೆಗಿನ ಮಾಜಿ ಸೈನಿಕರ ಮಕ್ಕಳು, ದ್ವಿತೀಯ ಪಿ.ಯು.ಸಿ ಯಲ್ಲಿ ಶೇ.60 ಕ್ಕಿಂತ ಅಧಿಕ ಅಂಕಗಳನ್ನು ಪಡೆದು, ಇಂಜಿನಿಯರಿಂಗ್, ಮೆಡಿಕಲ್ ಮತ್ತು ಇತರೆ ವೃತ್ತಿಪರ ಶಿಕ್ಷಣದಲ್ಲಿ ಪದವಿ ವ್ಯಾಸಂಗಕ್ಕಾಗಿ 2024–25ನೇ ಸಾಲಿನಲ್ಲಿ ಪ್ರವೇಶಾತಿ (ಅಡ್ಮಿಷನ್) ಪಡೆದು ಪ್ರಥಮ ವರ್ಷದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಂದ ಪ್ರಧಾನ ಮಂತ್ರಿ ಶಿಷ್ಯವೇತನ ಯೋಜನೆ (ಪ್ರಧಾನ ಮಂತ್ರಿ ಸ್ಕಾಲರ್‌ಶಿಪ್ ಸ್ಕೀಮ್) ಎಂಬ ಶೀರ್ಷಿಕೆಯಡಿ ಶಿಷ್ಯವೇತನಕ್ಕಾಗಿ ಜಾಲತಾಣ HTTPS:// ONLINE.KSB.GOV.INದಲ್ಲಿ ಅರ್ಜಿಗಳನ್ನು ಆಹ್ವಾನಿಸಿಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಸೈನಿಕ ಕಲ್ಯಾಣ ಮತ್ತು ಪುನರ್ವಸತಿ ಇಲಾಖೆ 08182-220925ನ್ನು ಸಂಪರ್ಕಿಸುವುದು.

# ಸಮಾಲೋಚಕರು, ಪರಿವರ್ತಕರ ಹುದ್ದೆಗೆ ಅರ್ಜಿ ಆಹ್ವಾನ

ಮಡಿಕೇರಿ – ಕರ್ನಾಟಕ ಸರ್ಕಾರ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಜನ ಆರೋಗ್ಯ ಸಂಸ್ಥೆ, ಎಪಿಡಿಮಿಯಾಲಾಜಿ ವಿಭಾಗ, ನಿಮ್ಹಾನ್ಸ್, ಬೆಂಗಳೂರು ಇವರ ಸಹಯೋಗದಲ್ಲಿ ಅನುಷ್ಠಾನಗೊಳ್ಳುತ್ತಿರುವ ಹಾಗೂ ರಾಜ್ಯ ಸರ್ಕಾರದ ಅನುದಾನಿತ ಯೋಜನೆಯಾದ "ಯುವ ಸ್ಪಂದನ" ಯೋಜನೆ–ಯುವಜನರ ಮಾನಸಿಕ ಆರೋಗ್ಯಕ್ಕೆ ಪೂರಕ ಸೇವೆಗಳನ್ನು ಒದಗಿಸಲು ಹಾಗೂ ಸಮಗ್ರ ಅಭಿವೃದ್ಧಿ ಮತ್ತು ಅನುಷ್ಠಾನಡಿಯಲ್ಲಿ ಕಚೇರಿ ಕೆಲಸಕ್ಕೆ ಯುವ ಸಮಾಲೋಚಕರು ಹಾಗೂ ಯುವ ಪರಿವರ್ತಕರು ಕಾರ್ಯನಿರ್ವಹಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ದೂ.ಸಂ. 9632104204, 7204363367 ಸಂಪರ್ಕಿಸಬಹುದು ಎಂದು ತಿಳಿಸಿದ್ದಾರೆ.

# ಪುಸ್ತಕ ಬಹುಮಾನಕ್ಕೆ ಅರ್ಜಿ ಆಹ್ವಾನ

ಮಡಿಕೇರಿ – ಕರ್ನಾಟಕ ಕೊಡವ ಸಾಹಿತ್ಯ ಅಕಾಡೆಮಿಯಿಂದ ಕಳೆದ 2022–23, 2023–24ನೇ ಸಾಲಿನ ಕೊಡವ ಪುಸ್ತಕ ಬಹುಮಾನಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಪ್ರಶಸ್ತಿಗೆ ಅರ್ಜಿ ಸಲ್ಲಿಸುವವರು ಲಕೋಟೆಯ ಮೇಲೆ "ಕೊಡವ ಅಕಾಡೆಮಿಯ ಪುಸ್ತಕ ಬಹುಮಾನ–2022–23" ಅಥವಾ "ಕೊಡವ ಅಕಾಡೆಮಿ ಪುಸ್ತಕ ಬಹುಮಾನ–2023–24" ಎಂದು ಕಡ್ಡಾಯವಾಗಿ ಬರೆದು, ಅಧ್ಯಕ್ಷರು/ರಿಜಿಸ್ಟ್ರಾರ್ ಕರ್ನಾಟಕ ಕೊಡವ ಸಾಹಿತ್ಯ ಅಕಾಡೆಮಿ, ಸ್ಕೌಟ್ಸ್ ಭವನ, ಮ್ಯಾನ್ಸ್ ಕಾಂಪೌಂಡ್ ಮಡಿಕೇರಿ–571201, ಈ ವಿಳಾಸಕ್ಕೆ ಜನವರಿ, 20 ರೊಳಗೆ ಸಲ್ಲಿಸುವಂತೆ ಅಧ್ಯಕ್ಷರಾದ ಅಜ್ಜಿನಿಕಂಡ ಸಿ. ಮಹೇಶ್ ನಾಚಯ್ಯ ಅವರು ತಿಳಿಸಿದ್ದಾರೆ.

# ಅಮಿತ್‌ಷಾರನ್ನು ವಜಾಗೊಳಿಸುವಂತೆ ಪ್ರತಿಭಟನೆ



ಕೊಣಾಜೆ: ಬಾಬಾ ಸಾಹೇಬ್ ಅಂಬೇಡ್ಕರ್ ಬಗ್ಗೆ ತುಚ್ಚವಾಗಿ ಮಾತನಾಡಿದ ಕೇಂದ್ರ ಗೃಹ ಸಚಿವ ಅಮಿತ್ ಷಾ ರನ್ನು ಲೋಕಸಭೆಯಿಂದ ವಜಾಗೊಳಿಸುವಂತೆ ಆಗ್ರಹಿಸಿ ಡಿವೈಎಫ್‌ಐ ಹರೇಕಳ ಗ್ರಾಮ ಸಮಿತಿಯಿಂದ ಹರೇಕಳ ಕಡವಿನಬಳಿಯಲ್ಲಿ ಪ್ರತಿಭಟನೆ ನಡೆಯಿತು. ಪ್ರತಿಭಟನೆಯನ್ನು ಉದ್ದೇಶಿಸಿ ಮಾತನಾಡಿದ ಡಿವೈಎಫ್‌ಐ ಜಿಲ್ಲಾಧ್ಯಕ್ಷ ಬಿ.ಕೆ. ಇಮ್ತಿಯಾಝ್ ಅವರು, ಬಾಬಾ ಸಾಹೇಬ್ ಅಂಬೇಡ್ಕರವರು ಸಂವಿಧಾನ ರಚನೆ ಮಾಡದೇ ಇದ್ದರೆ ಇಂದು ನೀವು ಸಂಸತ್ತಿನಲ್ಲಿರುತ್ತಿರಲಿಲ್ಲ ಬದಲಾಗಿ ಪ್ರಧಾನಿ ನರೇಂದ್ರ ಮೋದಿ ಹೇಳಿದ ಹಾಗೆ ನೀವು ಪಕೋಡ ಮಾರುತ್ತಾ ಇರಬೇಕಿತ್ತು. ಈ ದೇಶದಲ್ಲಿ ಧರ್ಮ,ಜಾತಿ,ಪಂಗಡ,ಭಾಷೆಯ ಭೇದವಿಲ್ಲದೆ ನಾವು ಬದುಕಲು ಮೂಲ ಕಾರಣವೇ ಬಾಬಾ ಸಾಹೇಬ್ ಅಂಬೇಡ್ಕರ್ ರವರು ರಚಿಸಿದ ಸಂವಿಧಾನ ಎಂದು ಹೇಳಿದರು.

# ಕೆಡಿಪಿ ಸಭೆ : ಅನುದಾನ ನೀಡುವಲ್ಲಿ ತಾರತಮ್ಯ ಆರೋಪ



ಮಂಗಳೂರು : ಕಳೆದ ಎರಡು ವರ್ಷಗಳಿಂದ ದ.ಕ. ಜಿಲ್ಲೆಗೆ ಯಾವುದೇ ಹೊಸ ಯೋಜನೆ ನೀಡಲು ರಾಜ್ಯ ಸರಕಾರದಿಂದ ಸಾಧ್ಯವಾಗಿಲ್ಲ. ಮಾತ್ರವಲ್ಲದೆ ತುರ್ತು ಕಾಮಗಾರಿಗಳಿಗೂ ಅನುದಾನ ನೀಡದೆ ಕರಾವಳಿ ಜಿಲ್ಲೆಯ ಬಗ್ಗೆ ಸರಕಾರ ತಾರತಮ್ಯ ಧೋರಣೆ ಅನುಸರಿಸಿದೆ ಎಂದು ಆರೋಪಿಸಿದ ಬಿಜೆಪಿ ಶಾಸಕರು, ಜಿಲ್ಲಾ ಉಸ್ತುವಾರಿ ಸಚಿವರ ಉತ್ತರಕ್ಕೂ ಕಾಯದೆ ಸಭಾತ್ಯಾಗ ಮಾಡಿದ ಪ್ರಸಂಗ ತ್ರೈಮಾಸಿಕ ಕೆಡಿಪಿ ಸಭೆಯಲ್ಲಿ ನಡೆಯಿತು. ರಸ್ತೆಗಳ ಗುಂಡಿ ಮುಚ್ಚಲು ಅನುದಾನ ನೀಡಿಲ್ಲ. ಕರಾವಳಿ ಜಿಲ್ಲೆಗೆ ಅಭಿವೃದ್ಧಿಯ ದೃಷ್ಟಿಯಿಂದ ಯಾವುದೇ ಯೋಜನೆಯನ್ನು ಕಳೆದರಡು ವರ್ಷಗಳಿಂದ ನೀಡಲು ರಾಜ್ಯ ಸರಕಾರದಿಂದ ಸಾಧ್ಯ ಆಗಿಲ್ಲ. ಆಡಳಿತಾಧಿಕಾರಿಗಳು ದುಡ್ಡಿಲ್ಲ ಎನ್ನುವ ಪರಿಸ್ಥಿತಿ ನಿರ್ಮಾಣವಾಗಿದೆ. ನ್ಯಾಯ ಕೊಡಬೇಕು ಎಂದು ಬಿಜೆಪಿ ಶಾಸಕರು ದೂರಿದರು.

# ಬಿಜೆಪಿ ಕಚೇರಿಗೆ ಮುತ್ತಿಗೆ ಯತ್ನ



ಮಂಗಳೂರು : ಸಚಿವೆ ಲಕ್ಷ್ಮಿ ಹೆಬ್ಬಾಳ್ಕರ್ ವಿರುದ್ಧ ವಿಧಾನ ಪರಿಷತ್ ಸದಸ್ಯ ಸಿ.ಟಿ. ರವಿ ಅಶ್ಲೀಲ ಪದ ಬಳಕೆ ಮಾಡಿದ್ದನ್ನು ಖಂಡಿಸಿ ಶನಿವಾರ ಪ್ರತಿಭಟನೆ ನಡೆಸಿದ ಎನ್‌ಎಸ್‌ಯುಐ ದ.ಕ.ಜಿಲ್ಲಾ ಸಮಿತಿಯು ಬಿಜೆಪಿ ಕಚೇರಿಗೆ ಮುತ್ತಿಗೆ ಹಾಕಲು ಯತ್ನಿಸಿತು. ಈ ಸಂದರ್ಭ ಪೊಲೀಸರು ವಿಧಾನ ಪರಿಷತ್ ಸದಸ್ಯ ಐವನ್ ಡಿಸೋಜ, ಎನ್‌ಎಸ್‌ಯುಐ ದ.ಕ.ಜಿಲ್ಲಾಧ್ಯಕ್ಷ ಸುಹಾನ್ ಆಳ್ವ ಸಹಿತ ಹಲವು ಮಂದಿಯನ್ನು ವಶಕ್ಕೆ ಪಡೆದುಕೊಂಡರು. ನಗರದ ಕೋಡಿಯಾಲ್ ಬೈಲ್‌ನಲ್ಲಿರುವ ಬಿಜೆಪಿ ಕಚೇರಿಯ ಮುಂದೆ ಪ್ರತಿಭಟನೆ ನಡೆಸಿದ ಎನ್‌ಎಸ್‌ಯುಐ ಕಾರ್ಯಕರ್ತರು ಬಳಿಕ ಬಿಜೆಪಿ ಕಚೇರಿಗೆ ಮುತ್ತಿಗೆ ಹಾಕಲು ಮುಂದಾಯಿತು. ತಕ್ಷಣ ಪೊಲೀಸರು ಮುಖಂಡರ ಸಹಿತ ಕಾರ್ಯಕರ್ತರನ್ನು ವಶಕ್ಕೆ ಪಡೆದುಕೊಂಡರು.

# ಅಂಬೇಡ್ಕರ್ ವಿರುದ್ಧ ವ್ಯವಸ್ಥಿತ ಪಿತೂರಿ : ನಾರಾಯಣ ಮಣೂರು



ಉಡುಪಿ : ಶತಶತಮಾನಗಳಿಂದ ಹೆಣ್ಣುಮಕ್ಕಳು, ಹಿಂದುಳಿದ ವರ್ಗ, ಶೂದ್ರ, ಮುಸ್ಲಿಮರು, ಕ್ರಿಶ್ಚಿಯನ್ನರನ್ನು ಎರಡನೇ ದರ್ಜೆ ಪ್ರಜೆಗಳನ್ನಾಗಿ ಪರಿಗಣಿಸಿಕೊಂಡು ಬಂದ ಸಾವಿರಾರು ವರ್ಷಗಳ ಇತಿಹಾಸ ಇರುವ ಭಾರತಕ್ಕೆ ಅಂಬೇಡ್ಕರ್ ಸಮಾನವತೆ ಅವಕಾಶ ಕಲ್ಪಿಸಿ, ಸಮಸಮಾಜ ಕಟ್ಟಿದರು. ಇದನ್ನು ಒಪ್ಪಲಾರದ ಕೋಮುವಾದಿ, ಬ್ರಾಹ್ಮಣವಾದಿ, ಮನುವಾದಿ ಮನಸ್ಥಿತಿಗಳು ಅಂಬೇಡ್ಕರ್ ವಿರುದ್ಧ ವ್ಯವಸ್ಥಿತ ಪಿತೂರಿ ನಡೆಸುತ್ತಿವೆ ಎಂದು ಹಿರಿಯ ಚಿಂತಕ ನಾರಾಯಣ ಮಣೂರು ಆರೋಪಿಸಿದ್ದಾರೆ. ಬಿಜೆಪಿ ಹಾಗೂ ಸಂಘ ಪರಿವಾರ ಜನರ ಮನಸ್ಸಿನಲ್ಲಿ ಜಾತಿಯ ವಿಷ ಬಿತ್ತುವ ವ್ಯವಸ್ಥಿತ ಕಾರ್ಯ ಮಾಡುತ್ತಿದೆ, ಹೋರಾಟ ಇಲ್ಲಿಗೆ ನಿಲ್ಲುವುದಿಲ್ಲ. ಇದಕ್ಕೆ ತಕ್ಕ ಉತ್ತರವನ್ನು ನಾಗರಿಕರು ನೀಡಲಿದ್ದಾರೆ ಎಂದು ಅವರು ಎಚ್ಚರಿಕೆ ನೀಡಿದರು.

# ಕೇಂದ್ರ ಸರಕಾರದ ನೀತಿಗಳಿಂದ ಕಾರ್ಮಿಕರ ಶೋಷಣೆ



ಕುಂದಾಪುರ: ಕೇಂದ್ರ ಸರಕಾರ ಶ್ರೀಮಂತ ಉದ್ದಿಮೆದಾರರ ಪರವಾದ ನೀತಿಗಳು ಕಾರ್ಮಿಕರ ಶೋಷಣೆಯನ್ನು ಹೆಚ್ಚಿಸು ವುದಾಗಿದೆ. ಕಾರ್ಮಿಕ ವರ್ಗಕ್ಕೆ ಮಾರಕವಾದ ಕಾರ್ಮಿಕ ಕಾಯ್ದೆಗಳ ತಿದ್ದುಪಡಿಯನ್ನು ಕೇಂದ್ರ ಸರಕಾರ ಕೈ ಬಿಡಬೇಕು ಎಂದು ಸಿಐಟಿಯು ಕುಂದಾಪುರ ತಾಲೂಕು ಸಂಚಾಲಕ ಚಂದ್ರಶೇಖರ್ ವಿ. ಆಗ್ರಹಿಸಿದ್ದಾರೆ. ಕಿರು ಕೈಗಾರಿಕೆಗಳಿಗೆ ಯಾವುದೇ ರಕ್ಷಣೆ ಇಲ್ಲವಾಗಿದೆ. ಅದನ್ನೇ ಅವಲಂಬಿಸಿದ ಕಾರ್ಮಿಕರು ಬೀದಿಗೆ ಬೀಳುತ್ತಿದ್ದಾರೆ. ಉಡುಪಿ ಜಿಲ್ಲೆಯಲ್ಲಿರುವ ಹಂಚು ಕಾರ್ಖಾನೆಗಳು ಇಂದು ಮಾರುಕಟ್ಟೆ ಸಮಸ್ಯೆಯಿಂದ ಬಳಲುತ್ತಿದ್ದು ಕಚ್ಚಾ ಸಾಮಾಗ್ರಿ ದೊರಕುತ್ತಿಲ್ಲ. ಈ ಸಂದರ್ಭದಲ್ಲಿ ಸರಕಾರ ಉದ್ದಿಮೆ ರಕ್ಷಣೆಗೆ ದಾವಿಸಬೇಕಾಗಿದೆ. ಗಣಿಗಾರಿಕೆ ಸಮಸ್ಯೆ ಉದ್ದಿಮೆಗೆ ಮಾರಕವಾಗಿದೆ ಎಂದರು.

# ಉಡುಪಿ : ಅಕ್ರಮ ಕಟ್ಟಡದಲ್ಲಿ ಮತಾಂತರ ಆರೋಪ



ಉಡುಪಿ: ಉಡುಪಿ ನಗರಸಭಾ ವ್ಯಾಪ್ತಿಯಲ್ಲಿನ ಅಕ್ರಮ ಪ್ರಾರ್ಥನ ಕೇಂದ್ರದಲ್ಲಿ ನಡೆಯುತ್ತಿದೆ ಎನ್ನಲಾದ ಮತಾಂತರ ವಿಚಾರವು ಇಂದು ನಡೆದ ಉಡುಪಿ ನಗರಸಭೆ ಸಾಮಾನ್ಯ ಸಭೆಯಲ್ಲಿ ಸಾಕಷ್ಟು ಚರ್ಚೆ ಹಾಗೂ ಗದ್ದಲಕ್ಕೆ ಕಾರಣವಾಯಿತು. ನಗರಸಭೆ ಅಧ್ಯಕ್ಷ ಪ್ರಭಾಕರ ಪೂಜಾರಿ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ವಿಷಯ ಪ್ರಸ್ತಾಪಿಸಿದ ಆಡಳಿತ ಪಕ್ಷದ ಸದಸ್ಯ ವಿಜಯ ಕೊಡವೂರು, ನಗರದ ಜೋಡುಕಟ್ಟೆ ಸಮೀಪ ಇರುವ ಮನೆಯೊಂದರಲ್ಲಿ ಅಕ್ರಮವಾಗಿ ಪ್ರಾರ್ಥನಾ ಕೇಂದ್ರ ನಡೆಸಿ ಮತಾಂತರ ನಡೆಸಲಾಗುತ್ತಿದೆ ಎಂದು ಆರೋಪಿಸಿದರು. ಕಾನೂನು ಬಾಹಿರ ಕಟ್ಟಡವನ್ನು ತೆರವು ಮಾಡಬೇಕು. ಮುಂದೆ ಏನೇ ಅನಾಹುತ ನಡೆದರೂ ಅಧಿಕಾರಿಗಳೇ ಜವಾಬ್ದಾರರು. ಈ ಕಟ್ಟಡದಲ್ಲಿ ಹಾಕಿರುವ ಪ್ರಚೋದನಾಕಾರಿ ಪೋಸ್ಟರ್‌ನ್ನು ತೆರವುಗೊಳಿಸಬೇಕು ಎಂದರು.

# ಸಾಸ್ತಾನ ಟೋಲ್ ಗೇಟ್‌ಗೆ ಮುತ್ತಿಗೆ



ಕೋಟ : ಕೋಟ ಜಿಲ್ಲಾ ಪಂಚಾಯತ್ ವ್ಯಾಪ್ತಿಯಲ್ಲಿರುವ ವಾಣಿಜ್ಯ ವಾಹನಗಳಿಗೆ ಸಾಸ್ತಾನ ಟೋಲ್ ಗೇಟ್‌ನಲ್ಲಿ ಶುಲ್ಕ ವಿಧಿಸುತ್ತಿರುವ ಕ್ರಮವನ್ನು ವಿರೋಧಿಸಿ ರವಿವಾರ ಪ್ರತಿಭಟನೆ ನಡೆಸಲಾಯಿತು. ಸಾಸ್ತಾನ ಟೋಲ್ ಕೇಂದ್ರಕ್ಕೆ ಮುತ್ತಿಗೆ ಹಾಕಿದ ವಾಹನ ಚಾಲಕರು ಮತ್ತು ಮಾಲಕರು ಹಾಗೂ ಸಾರ್ವಜನಿಕರು ಜಿಲ್ಲಾಡಳಿತ ಮತ್ತು ಟೋಲ್ ಕೇಂದ್ರದ ವಿರುದ್ಧ ದಿಕ್ಕಾರ ಕೂಗಿದರು. ಈ ಸಂದರ್ಭ ಸ್ಥಳದಲ್ಲಿ ಆಗಮಿಸಿದ ಸಂಸದ ಕೋಟ ಶ್ರೀನಿವಾಸ ಪೂಜಾರಿ ಸಾರ್ವಜನಿಕರಿಗೆ ಆಗುತ್ತಿರುವ ಸಮಸ್ಯೆ ಬಗ್ಗೆ ಜಿಲ್ಲಾಡಳಿತದ ಗಮನ ಸೆಳೆದರು. ವಾಹನಕ್ಕೆ ಪೆಟ್ರೋಲ್ ಹಾಕಬೇಕಾದರೂ ಟೋಲ್ ಕೊಟ್ಟು ಹೋಗಬೇಕಾದಂತಹ ಪರಿಸ್ಥಿತಿಯಲ್ಲಿ ಟೋಲ್ ಸಂಗ್ರಹ ಎನ್ನುವುದು ಸರಿಯಲ್ಲ. ಮೊದಲಿನಂತೆ ಕೋಟ ಜಿಪಂ ವ್ಯಾಪ್ತಿಯಲ್ಲಿ ಟೋಲ್ ವಿನಾಯತಿ ನೀಡಬೇಕೆಂದು ಜಿಲ್ಲಾಧಿಕಾರಿಗಳಿಗೆ ಸೂಚಿಸಿದರು.

# ಜಿಎಸ್‌ಟಿ ಇಳಿಸಲು ಬೀಡಿ ಕಾರ್ಮಿಕ ಸಂಘಟನೆಗಳ ಆಗ್ರಹ



ಮಂಗಳೂರು: ಬೀಡಿಯ ಮೇಲೆ ವಿಧಿಸಲಾದ ಜಿಎಸ್‌ಟಿಯನ್ನು ಶೇ 28ರಿಂದ ಶೇ 5ಕ್ಕೆ ಇಳಿಸುವಂತೆ ಬಿಎಂಎಸ್ ಸಂಯೋಜಿತ ಬೀಡಿ ಮಜ್ದೂರ್ ಸಂಘ(ರಿ) ಮತ್ತು ಎಚ್‌ಎಂಎಸ್ ಸಂಯೋಜಿತ ಕರ್ನಾಟಕ ಕರಾವಳಿ ಬೀಡಿ ವರ್ಕರ್ಸ್ ಯೂನಿಯನ್ ಸರಕಾರವನ್ನು ಆಗ್ರಹಿಸಿದೆ. ನಗರದ ಖಾಸಗಿ ಹೊಟೆಲಿನಲ್ಲಿ ಏರ್ಪಡಿಸಿದ್ದ ಜಂಟಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬೀಡಿ ಮಜೂರ್ ಸಂಘದ ಕೆ ವಿಶ್ವನಾಥ ಶೆಟ್ಟಿ ಮತ್ತು ಕರ್ನಾಟಕ ಕರಾವಳಿ ಬೀಡಿ ವರ್ಕಸ್ ಯೂನಿಯನ್‌ನ ಅಧ್ಯಕ್ಷ ಮಹಮ್ಮದ್ ರಫಿ ಅವರು ಕರ್ನಾಟಕದಲ್ಲಿ ಜಿಎಸ್‌ಟಿ ಹೆಚ್ಚಳದಿಂದ ಬೀಡಿ ಕಾರ್ಮಿಕರು ಇನ್ನಷ್ಟು ಸಮಸ್ಯೆ ಎದುರಿಸಬೇಕಾದಿತು ಎಂದು ಆತಂಕ ವ್ಯಕ್ತಪಡಿಸಿದರು. ತಂಬಾಕು ಉತ್ಪನ್ನಗಳ ಜಿಎಸ್‌ಟಿ ದರವನ್ನು ಶೇ 35ಕ್ಕೆ ಹೆಚ್ಚಿಸುವ ಪ್ರಸ್ತಾಪದಿಂದ ಬೀಡಿಯನ್ನು ಹೊರಗಿಡಬೇಕು ಮತ್ತು ಬೀಡಿ ಮೇಲಿನ ಜಿಎಸ್‌ಟಿಯನ್ನು ಶೇ 5ಕ್ಕೆ ಇಳಿಸಬೇಕು ಎಂದು ಒತ್ತಾಯಿಸಿದರು.

# ನಂದಿನಿ ತಟದಲ್ಲಿ ತಲೆ ಎತ್ತಿದ ರೋಹನ್ ಎಸ್ಟೇಟ್ ಮುಕ್ಕ



ಮಂಗಳೂರು: ನಂದಿನಿ ನದಿಯ ತಟದಲ್ಲಿ ರೋಹನ್ ಎಸ್ಟೇಟ್ ಮುಕ್ಕ ಬಡಾವಣೆ ನಿರ್ಮಾಣವಾಗಿದ್ದು, ಪರಿಸರದ ಶ್ರೀಮಂತಿಕೆಯ ಜತೆಗೆ ಅತ್ಯಂತ ಸುರಕ್ಷಿತ ಹಾಗೂ ಆಕರ್ಷಕವಾಗಿ ಬಡಾವಣೆಯು ಮೂಡಿಬಂದಿದೆ. ಪ್ರಕೃತಿಯ ಜತೆಗೆ ಆರಾಮದಾಯಕ ಬದುಕಿಗಾಗಿ ಈ ಬಡಾವಣೆಯನ್ನು ವಿನ್ಯಾಸಗೊಳಿಸಲಾಗಿದೆ. ಇದೊಂದು ಪರಿಪೂರ್ಣವಾದ ರೆಸಾರ್ಟ್ ಮಾದರಿಯ ಬಡಾವಣೆಯಾಗಿ ರೂಪುಗೊಂಡಿದೆ ಎಂದು ರೋಹನ್ ಎಸ್ಟೇಟ್ ಮಾಲಿಕ ರೋಹನ್ ಮೊಂತೇರೋ ಹೇಳಿದರು. ಅವರು ನಗರದ ಖಾಸಗಿ ಹೊಟೆಲಿನಲ್ಲಿ ಮಾಹಿತಿ ನೀಡಿ, ರೋಹನ್ ಎಸ್ಟೇಟ್ ಮುಕ್ಕ. ಇದು ರೆಸಾರ್ಟ್ ಅಲ್ಲ. ರೆಸಾರ್ಟ್ ಶೈಲಿಯ ವಸತಿ ಬಡಾವಣೆ. ಶ್ರೀಮಂತಿಕೆ, ಐಶಾರಾಮಿ ಮಾದರಿ ಎಂಬಂತೆ ಪ್ರಕೃತಿಯ ಮಡಿಲಿನಲ್ಲಿ ತಲೆ ಎತ್ತಿ ನಿಂತಿರುವ ವಸತಿ ಬಡಾವಣೆಯಾಗಿದೆ.

# ಕಂಬಳಕ್ಕೆ 5 ಲಕ್ಷ ಅನುದಾನಕ್ಕೆ ಆದೇಶ



ಮಂಗಳೂರು: ನಾಡಿನ ಕಂಬಳ ಪ್ರಿಯರಿಗೆ ರಾಜ್ಯ ಸರ್ಕಾರ ಸಿಹಿ ಸುದ್ದಿ ನೀಡಿದ್ದು, ಕರಾವಳಿಯ ಪ್ರತಿ ಕಂಬಳಕ್ಕೂ 5 ಲಕ್ಷ ರೂಪಾಯಿ ನೀಡಲು ಸರಕಾರ ಆದೇಶ ನೀಡಿದೆ. ಕಳೆದ ವರ್ಷ ಕಂಬಳಕ್ಕೆ ರಾಜ್ಯ ಸರ್ಕಾರ ಅನುದಾನ ನೀಡಿರಲಿಲ್ಲ. ಈ ಬಗ್ಗೆ ಕಂಬಳಪ್ರಿಯರು ಬೇಸರ ವ್ಯಕ್ತಪಡಿಸಿದ್ದರು. ಬೆಳಗಾವಿಯಲ್ಲಿ ನಡೆದ ಅಧಿವೇಶನದಲ್ಲೂ ಕರಾವಳಿಯ ಶಾಸಕರು ಬೇಡಿಕೆ ಸಲ್ಲಿಸಿದರು. ಸ್ವತಃ ಸ್ಪೀಕರ್ ಯುಟಿ ಖಾದರ್ ಸರ್ಕಾರ ನೆರವು ಕೊಡದಿದ್ದರೆ ನಾವೇ ಹಣ ಸಂಗ್ರಹಿಸಿ ಕಂಬಳ ಮಾಡಲು ಗೊತ್ತು ಎಂದು ಚಾಟಿ ಬೀಸಿದ್ದರು. ಯು.ಟಿ.ಖಾದರ್ ಚಾಟಿ ಬೀಸಿದ ಬೆನ್ನಲ್ಲೇ ಕಂಬಳಕ್ಕೆ ಅನುದಾನ ಬಿಡುಗಡೆಗೆ ಮುಖ್ಯಮಂತ್ರಿಗಳ ಶಿಫಾರಸಿನ ಮೇರೆಗೆ ಆದೇಶ ನೀಡಿದ್ದಾರೆ. ಪ್ರವಾಸೋದ್ಯಮ ಸಚಿವ ಎಚ್ ಕೆ ಪಾಟೀಲ್ ಆದೇಶ ನೀಡಿದ್ದು, 2024– 25ನೇ ಸಾಲಿನ 24 ಜೋಡು ಕರೆ ಕಂಬಳಗಳಿಗೆ ತಲಾ 5 ಲಕ್ಷ ರೂ. ಸರ್ಕಾರದ ಆದೇಶದಿಂದ ಕಂಬಳ ಪ್ರೀಯರಲ್ಲಿ ಹರ್ಷ ಉಂಟಾಗಿದೆ.

# ಗ್ಯಾರಂಟಿ ಯೋಜನೆ ಅನುಷ್ಠಾನದಲ್ಲಿ ದ.ಕ ಅಗ್ರಸ್ಥಾನ



ಮಂಗಳೂರು: ಗ್ಯಾರಂಟಿ ಯೋಜನೆಯ ಅನುಷ್ಠಾನದ ಬಳಿಕ ಕರ್ನಾಟಕ ರಾಜ್ಯ ಜಿಡಿಪಿ ಸೂಚ್ಯಂಕದ ಪ್ರಕಾರ ದೇಶದಲ್ಲಿ ಪ್ರಥಮ ಸ್ಥಾನದಲ್ಲಿದೆ. ಕಾಂಗ್ರೆಸ್ ನೇತೃತ್ವದ ರಾಜ್ಯ ಸರಕಾರ ಅಧಿಕಾರಕ್ಕೆ ಬಂದ ಆರು ತಿಂಗಳು ಕಳೆಯುವುದರೊಳಗೆ ಎಲ್ಲಾ ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದೆ. ದಕ್ಷಿಣ ಕನ್ನಡ ಜಿಲ್ಲೆ ಗ್ಯಾರಂಟಿ ಯೋಜನೆಗಳ ಅನುಷ್ಠಾನದಲ್ಲಿ ಅಗ್ರಸ್ಥಾನದಲ್ಲಿದೆ ಎಂದು ದಕ್ಷಿಣ ಕನ್ನಡ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾ ಅಧ್ಯಕ್ಷ ಭರತ್ ಮುಂಡೋಡಿ ತಿಳಿಸಿದ್ದಾರೆ. ನಗರದ ಪತ್ರಿಕಾ ಭವನದಲ್ಲಿ ದಕ್ಷಿಣ ಕನ್ನಡ ಕಾರ್ಯ ನಿರತ ಪತ್ರಕರ್ತರ ಸಂಘದ ವತಿಯಿಂದ ಹಮ್ಮಿಕೊಂಡ ಮಾಧ್ಯಮ ಸಂವಾದ ಗೋಷ್ಠಿಯಲ್ಲಿ ಗ್ಯಾರಂಟಿ ಯೋಜನೆಗಳ ಬಗ್ಗೆ ಅವರು ವಿವರಣೆ ನೀಡಿದರು.

# ಒಳಾಂಗಣ ಕ್ರೀಡಾಂಗಣವಾದರೂ ಮಾಡಲಿ–ರಾಕೇಶ್ ಮಲ್ಲಿ




ಮಂಗಳೂರು: "ದಕ್ಷಿಣ ಕನ್ನಡ ಜಿಲ್ಲಾ ಅಮೆಚೂರ್ ಕಬಡ್ಡಿ ಅಸೋಸಿಯೇಷನ್ ಸತತವಾಗಿ ನಾಲ್ಕು ವರ್ಷಗಳಲ್ಲಿ ಪ್ರಥಮ ಸ್ಥಾನ ಪಡೆದುಕೊಂಡಿದೆ. ಸುಮಾರು ಎರಡು ದಶಕಗಳ ಕಾಲ ಜಿಲ್ಲೆಯಿಂದ ಅನೇಕ ಕಬಡ್ಡಿ ಪಟುಗಳನ್ನು ರಾಜ್ಯ, ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟಕ್ಕೆ ಕಳುಹಿಸಿದ ಕೀರ್ತಿ ನಮ್ಮ ಸಂಸ್ಥೆಯದ್ದಾಗಿದೆ. ಭಾರತ ಮಹಿಳಾ ಕಬಡ್ಡಿ ತಂಡದ ನಾಯಕಿ ಮಮತಾ ಪೂಜಾರಿ ಅವರನ್ನು ಕಳುಹಿಸಿದ್ದು ನಮ್ಮ ಸಂಸ್ಥೆಯಾಗಿದೆ. ಇಷ್ಟೆಲ್ಲ ಇದ್ದರೂ ಬೆಳ್ತಂಗಡಿ ಶಾಸಕ ಹರೀಶ್ ಪೂಂಜಾ ಅವರು ಸದನದಲ್ಲಿ ನಮ್ಮ ಸಂಸ್ಥೆಯ ಬಗ್ಗೆ ಸುಳ್ಳು ಮಾಹಿತಿ ನೀಡಿರುವುದು ಖಂಡನೀಯ. ಇದರ ವಿರುದ್ಧ ಸಭಾಪತಿಗಳು ಕ್ರಮ ಕೈಗೊಳ್ಳಬೇಕು. ನಮ್ಮ ಸಂಸ್ಥೆಯ ಗೌರವಾಧ್ಯಕ್ಷರಾಗಿದ್ದುಕೊಂಡು ತಪ್ಪು ಮಾಹಿತಿ ನೀಡಿರುವುದು ಸರಿಯಲ್ಲ ಎಂದರು. ಅವರಿಗೆ ಕಬಡ್ಡಿ ಮೇಲೆ ಅಷ್ಟುಪ್ರೀತಿ ಇರುವುದಾದರೆ ಕ್ಷೇತ್ರದಲ್ಲಿ ಒಂದು ಒಳಾಂಗಣ ಕ್ರೀಡಾಂಗಣವನ್ನಾದರೂ ಮಾಡಲಿ ಎಂದರು.

# ನೌಕರರ ಸಂಘದಿಂದ ಡಿಸಿ ಕಚೇರಿ ಎದುರು ಧರಣಿ



ಉಡುಪಿ : ಅಕ್ಷರ ದಾಸೋಹ ನೌಕರರ ಸಂಘದ (ಸಿಐಟಿಯು) ಉಡುಪಿ ವಲಯ ಸಮಿತಿ ನೇತೃತ್ವದಲ್ಲಿ ಇಂದು ಮಣಿಪಾಲದಲ್ಲಿರುವ ಜಿಲ್ಲಾಧಿಕಾರಿ ಕಛೇರಿ ಮುಂದೆ ತಮ್ಮ 21 ಪ್ರಮುಖ ಬೇಡಿಕೆಗಳನ್ನು ಈಡೇರಿಸುವಂತೆ ಒತ್ತಾಯಿಸಿ ಧರಣಿ ನಡೆಸಲಾಯಿತು. ಧರಣಿಯ ಕೊನೆಯಲ್ಲಿ ಸ್ಥಳಕ್ಕೆ ಆಗಮಿಸಿದ ಜಿಲ್ಲಾಧಿಕಾರಿ ಡಾ.ಕೆ. ವಿದ್ಯಾಕುಮಾರಿ ಅವರ ಮುಖಾಂತರ ಪ್ರಧಾನ ಮಂತ್ರಿ ಹಾಗೂ ಮುಖ್ಯಮಂತ್ರಿ ಅವರಿಗೆ ಮನವಿಯನ್ನು ಸಲ್ಲಿಸಿ ಅಕ್ಷರ ದಾಸೋಹ ನೌಕರರಿಗೆ ರಾಜ್ಯ ಹಾಗೂ ಕೇಂದ್ರದ ಮುಂಬರುವ ಬಜೆಟ್‌ಗಳಲ್ಲಿ ವೇತನ ಹೆಚ್ಚಳಕ್ಕೆ ಹಣ ಮೀಸಲಿಡುವಂತೆ ಒತ್ತಾಯಿಸಲಾಯಿತು. ಧರಣಿಕಾರರ ಪ್ರಮುಖ ಬೇಡಿಕೆಗಳು: ಮಧ್ಯಾಹ್ನದ ಬಿಸಿಯೂಟ ಯೋಜನೆ ಪ್ರಾರಂಭಗೊಂಡು 24 ವರ್ಷಗಳು ಕಳೆದಿವೆ. 2014ರಿಂದ ಕೇಂದ್ರ ಸರಕಾರ ಯಾವುದೇ ಗೌರವಧನ ಹೆಚ್ಚಳ ಮಾಡಿಲ್ಲ.

# ಹಿರೇಬಂಡಾಡಿಯಲ್ಲಿ ಕಾಡಾನೆ ಪ್ರತ್ಯಕ್ಷ



ಉಪ್ಪಿನಂಗಡಿ: ಉಪ್ಪಿನಂಗಡಿ ಮತ್ತು ಹಿರೇಬಂಡಾಡಿ ಮಧ್ಯೆ ಕುಮಾರಧಾರಾ ನದಿ ತಟದಲ್ಲಿ ಕಾಡಾನೆ ಕಾಣಿಸಿಕೊಂಡಿದ್ದು, ಸ್ಥಳೀಯರು ಆತಂಕಗೊಂಡಿದ್ದಾರೆ. ಹಿರೇಬಂಡಾಡಿ ಸಮೀಪದ ಆಕಿರೆ ಗ್ರಾಮದ ಹಲವು ತೋಟಗಳಲ್ಲಿ ಕಾಡಾನೆಯ ಹೆಜ್ಜೆ ಗುರುತುಗಳು ಕಂಡುಬಂದಿದೆ. ಇಲ್ಲಿನ ಪ್ರಕಾಶ್, ಸಾಲಿಹ್ ಎಂಬವರ ತೋಟಕ್ಕೆ ಕಾಡಾನೆ ಕಳೆದ ರಾತ್ರಿ ನುಗ್ಗಿದ್ದು, ಕೆಲವು ಬಾಳೆಗಿಡಗಳನ್ನು ಧ್ವಂಸಗೊಳಿಸಿದೆ. ಹಿರೇಬಂಡಾಡಿ, ಅಡೇಕಲ್ ಪರಿಸರದಲ್ಲಿ ಕಾಡಾನೆ ಪ್ರತ್ಯಕ್ಷಗೊಂಡಿರುವ ಬಗ್ಗೆ ಮಾಹಿತಿ ಪಡೆದ ಅರಣ್ಯ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ.

# ಸುದ್ದಿ ತುಣುಕು

ರಾಷ್ಟ್ರೀಯ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವ ಕಾರ್ಯಕ್ರಮಕ್ಕೆ ರಾಹುಲ್ ಗಾಂಧಿ, ಮಲ್ಲಿಕಾರ್ಜುನ ಖರ್ಗೆ, ಸೋನಿಯಾ ಗಾಂಧಿ ಆಗಮಿಸಿದ್ದು ಡಿಸಿಎಂ ಡಿಕೆಶಿ ಅವರಿಗೆ ಸ್ವಾಗತ ಕೋರಿದರು.

ಫೆಬ್ರವರಿಯಲ್ಲಿ ದಾಂಪತ್ಯ ಜೀವನ ಆರಂಭಿಸಲಿರುವ ಡಾಲಿ ಧನಂಜಯ್, ಧನ್ಯತಾ ಮಾಜಿ ಪ್ರಧಾನಿ ಹೆಚ್.ಡಿ ದೇವೇಗೌಡ ಅವರ ನಿವಾಸಕ್ಕೆ ತೆರಳಿ ಮದುವೆಗೆ ಆಹ್ವಾನಿಸಿದ್ದಾರೆ.

ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ನಿಮಿತ್ತ ವೀರಸೌಧದಲ್ಲಿ ಪ್ರತಿಷ್ಠಾಪಿಸಲಾದ ಗಾಂಧೀಜಿ ಪ್ರತಿಮೆಯನ್ನು ಸಿಎಂ ಸಿದ್ದರಾಮಯ್ಯ ಅನಾವರಣ ಮಾಡಿದರು.

ಸೇನಾ ವಾಹನ ಅಪಘಾತದಲ್ಲಿ ಮೃತಪಟ್ಟ ಯೋಧರಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಂತಿಮ ನಮನ ಸಲ್ಲಿಸಿದರು.

ರಾಜರಾಜೇಶ್ವರಿನಗರ ಕ್ಷೇತ್ರದ ಬಿಜೆಪಿ ಶಾಸಕ ಮುನಿರತ್ನ ಮೇಲೆ ಮೊಟ್ಟೆ ಎಸೆದ ಪ್ರಕರಣ ಸಂಬಂಧ ನಂದಿನಿ ಲೇಔಟ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ.

ಮತ್ತೆ ವಾಯುಭಾರ ಕುಸಿತ ಆಗಿರುವ ಹಿನ್ನೆಲೆಯಲ್ಲಿ ರಾಜ್ಯದ ಹಲವು ಜಿಲ್ಲೆಗಳಲ್ಲಿ ಮಳೆಯಾಗಲಿದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

ಸುಮಾರು 16,320ಕೆ.ಜಿ. ಕಾಪರ್‌ಸ್ಕ್ರಾಪ್ ಕಳ್ಳತನ ಮಾಡಿದ್ದ ಮೂವರನ್ನು ಚಿಕ್ಕಮಗಳೂರು ನಗರ ಠಾಣೆಯ ಪೊಲೀಸರು ಬಂಧಿಸಿದ್ದಾರೆ.

ನಂದಿನಿ ಬ್ರಾಂಡ್ 'ರೆಡಿ ಟು ಕುಕ್' ನಂದಿನಿ ವೇ ಪ್ರೋಟೀನ್ ಆಧಾರಿತ ಇಡ್ಲಿ ಮತ್ತು ದೋಸೆ ಹಿಟ್ಟನ್ನು ಕೆಎಂಎಫ್ ಮಾರುಕಟ್ಟೆಗೆ ಬಿಡುಗಡೆ ಮಾಡಿದೆ.

ದಾವಣಗೆರೆ ಜಿಲ್ಲಾ ಉಸ್ತುವಾರಿ ಸಚಿವರ ಬದಲಾವಣೆಗೆ ಆಗ್ರಹಿಸಿ ಸಿಎಂ, ಡಿಸಿಎಂಗೆ ಪತ್ರ ಬರೆದಿದ್ದ ಶಾಸಕ ಶಿವಗಂಗಾ ಬಸವರಾಜ್ ವಿರುದ್ಧ ಸಚಿವ ಎಸ್.ಎಸ್.ಮಲ್ಲಿಕಾರ್ಜುನ್ ವಾಗ್ದಾಳಿ ನಡೆಸಿದ್ದಾರೆ.

23 ವರ್ಷಗಳ ಹಿಂದೆ ಬಳ್ಳಾರಿ ಹೊಸಪೇಟೆಯಿಂದ ಆಕಸ್ಮಿಕವಾಗಿ ನಾಪತ್ತೆಯಾಗಿ ಚಂಡೀಗಢ ತಲುಪಿದ್ದ ಸಾಕಮ್ಮ ಎಂಬ ಮಹಿಳೆ ಇದೀಗ ಅಧಿಕಾರಿಗಳ ಸಮನ್ವಯತೆಯಿಂದ ಮತ್ತೆ ಕುಟುಂಬ ಸೇರಿದ್ದಾರೆ.

1924ರ ಕಾಂಗ್ರೆಸ್ ಅಧಿವೇಶನದ ಶತಮಾನೋತ್ಸವದ ಹಿನ್ನೆಲೆಯಲ್ಲಿ ಗಾಂಧೀಜಿ ವಿಚಾರಧಾರೆಯನ್ನು ಪ್ರಚುರಪಡಿಸಲು "ಗಾಂಧಿ ಭಾರತ" ಹೆಸರಿನಲ್ಲಿ ವರ್ಷಪೂರ್ತಿ ರಾಜ್ಯದೆಲ್ಲೆಡೆ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ" ಎಂದು ಸಿಎಂ ಸಿದ್ದರಾಮಯ್ಯ ಹೇಳಿದ್ದಾರೆ.

ಶಕ್ತಿ ಯೋಜನೆಯಿಂದಾಗಿ ರಾಜ್ಯ ಸರ್ಕಾರಕ್ಕೆ ಅಪಾರ ನಷ್ಟವಾಗಿದ್ದು, ಸಾರಿಗೆ ನೌಕರರು ಪ್ರತಿಭಟಿಸುತ್ತಿದ್ದಾರೆ. ಯಾಮಾರಿಸುವುದರಲ್ಲಿ ಕಾಂಗ್ರೆಸಿಗರು ಪಳಗಿದವರು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ್ ಟೀಕಿಸಿದರು.

ಪೊಲೀಸರು ನನ್ನನ್ನು ಕರ್ಕೊಂಡು ಹೋಗಿ ರಾತ್ರಿಯೆಲ್ಲ ಸುತ್ತಾಡಿಸಿದ್ದಾರೆ. ಈ ರೀತಿ ಮಾಡಿದವರ ಮೇಲೆ ಕ್ರಮ ತೆಗೆದುಕೊಳ್ಳಬೇಕು ಎಂದು ಸಿ.ಟಿ.ರವಿ ಏಳು ಪುಟದ ಪತ್ರ ಬರೆದಿದ್ದಾರೆ ಎಂದು ಸಭಾಪತಿ ಬಸವರಾಜ ಹೊರಟ್ಟಿ ತಿಳಿಸಿದ್ದಾರೆ.

ಮಸೀದಿಯಿಂದ ಸುಮಾರು 200 ಮೀಟರ್ ದೂರದಲ್ಲಿ ಮತ್ತೊಂದು ಪುರಾತನ ಬಾವಿಯನ್ನು ಉತ್ತರ ಪ್ರದೇಶದ ಸಂಭಲ್ ಅಧಿಕಾರಿಗಳು ಪತ್ತೆ ಹಚ್ಚಿದ್ದಾರೆ. ಇದು ಈ ಪ್ರದೇಶದ ಐತಿಹಾಸಿಕ ಮಹತ್ವವನ್ನು ಮತ್ತಷ್ಟು ಹೆಚ್ಚಿಸಿದೆ.

ಮಂಡಲ – ಮಕರವಿಳಕ್ಕು ಋತುವಿನಲ್ಲಿ ಕೇರಳದ ಶಬರಿಮಲೆ ದೇವಸ್ಥಾನಕ್ಕೆ ಲಕ್ಷಗಟ್ಟಲೆ ಸಂಖ್ಯೆಯಲ್ಲಿ ಆಗಮಿಸುವ ಭಕ್ತರಿಗೆ ಉತ್ತಮ ಸೇವೆಗಳನ್ನು ಒದಗಿಸಲು ಹೊಸ ತಂತ್ರಜ್ಞಾನದ ಬಳಕೆ ಮಾಡಿಕೊಳ್ಳಲಾಗುತ್ತಿದೆ.

## ಮಶ್ರೂಮ್ ಪೆಪ್ಪರ್ ಫ್ರೈ



**ಬೇಕಾಗುವ ಪದಾರ್ಥಗಳು :**

ತೆಂಗಿನ ಎಣ್ಣೆ – 4 ಚಮಚ
ಈರುಳ್ಳಿ – 2
ಹಸಿಮೆಣಸಿನ ಕಾಯಿ – 4
ಮಶ್ರೂಮ್ – 400 ಗ್ರಾಂ
ಉಪ್ಪು – ರುಚಿಗೆ ತಕ್ಕಷ್ಟು
ಅರಿಶಿನದ ಪುಡಿ – ಚಿಟಿಕೆ
ಕಾಳುಮೆಣಸಿನ ಪುಡಿ – 4 ಚಮಚ
ಕೊತ್ತಂಬರಿ ಸೊಪ್ಪು – ಸ್ವಲ್ಪ
ಕರಿಬೇವು – ಒಗ್ಗರಣೆಗೆ
ನಿಂಬೆ ರಸ – ಅರ್ಧ ಚಮಚ
ಶುಂಠಿ ಬೆಳ್ಳುಳ್ಳಿ ಪೇಸ್ಟ್ – 1ಚಮಚ

**ಮಾಡುವ ವಿಧಾನ :**

ಮೊದಲಿಗೆ ಮಶ್ರೂಮ್‌ನ್ನು ತೊಳೆದು ಕತ್ತರಿಸಿ ಇಟ್ಟುಕೊಳ್ಳಬೇಕು. ಬಾಣಲೆಗೆ ಎಣ್ಣೆ ಹಾಕಿ, ಬಿಸಿಯಾದ ನಂತರ ಕರಿಬೇವು, ಈರುಳ್ಳಿ, ಹಸಿಮೆಣಸಿನ ಕಾಯಿ ಹಾಕಿ ಕೆಂಪಗೆ ಹುರಿದುಕೊಳ್ಳಬೇಕು. ಬಳಿಕ ಶುಂಠಿ ಬೆಳ್ಳುಳ್ಳಿ ಪೇಸ್ಟ್ ಹಾಕಿ, ನಂತರ ಮಶ್ರೂಮ್ ಹಾಗೂ ಉಪ್ಪು, ಅರಿಶಿನದ ಪುಡಿ ಹಾಕಿ 3 ನಿಮಿಷ ಬೇಯಿಸಿಕೊಳ್ಳಿ. ಮಶ್ರೂಮ್‌ನಲ್ಲಿ ನೀರು ಬಿಟ್ಟುಕೊಳ್ಳುವ ಕಾರಣ ನೀರು ಹಾಕುವ ಅವಶ್ಯಕತೆ ಇರುವುದಿಲ್ಲ. ಬಳಿಕ ಕಾಳು ಮೆಣಸಿನ ಪುಡಿ ಹಾಕಿ ಚೆನ್ನಾಗಿ ಮಿಶ್ರಣ ಮಾಡಿ, ಮತ್ತೆ 5 ನಿಮಿಷ ಮಧ್ಯಮ ಉರಿಯಲ್ಲಿ ಬೇಯಿಸಿ ಕೊನೆಯಲ್ಲಿ ಕೊತ್ತಂಬರಿ ಸೊಪ್ಪು ಹಾಗೂ ನಿಂಬೆಹಣ್ಣಿನ ರಸ ಹಾಕಿ ಮಿಶ್ರಣ ಮಾಡಿದರೆ ರುಚಿಯಾದ ಮಶ್ರೂಮ್ ಪೆಪ್ಪರ್ ಫ್ರೈ ಸವಿಯಲು ಸಿದ್ಧ.

## 'ದಿ ಆರ್ಡರ್ ಆಫ್ ಮುಬಾರಕ್ ಅಲ್ ಕಬೀರ್'




ಕುವೈತ್: ಪ್ರಧಾನಿ ನರೇಂದ್ರ ಮೋದಿ ಅವರಿಗೆ ಕುವೈತ್ ತನ್ನ ಅತ್ಯುನ್ನತ ನಾಗರಿಕ ಗೌರವ 'ದಿ ಆರ್ಡರ್ ಆಫ್ ಮುಬಾರಕ್ ಅಲ್ ಕಬೀರ್' ಅನ್ನು ನೀಡಿದೆ. ಮೋದಿಯವರ ವಿಶಿಷ್ಟ ಸಾಧನೆಗಳು ಮತ್ತು ಉಭಯ ದೇಶಗಳ ನಡುವಿನ ಸಂಬಂಧವನ್ನು ಬಲಪಡಿಸುವ ಅವರ ಪ್ರಯತ್ನಗಳನ್ನು ಶ್ಲಾಘಿಸಿ ಕುವೈತ್ ಈ ಗೌರವವನ್ನು ಪ್ರದಾನ ಮಾಡಿದೆ. ಇದು ಪ್ರಧಾನಿ ಮೋದಿಗೆ ದೇಶವೊಂದು ನೀಡುವ 20ನೇ ಅಂತಾರಾಷ್ಟ್ರೀಯ ಗೌರವವಾಗಿದೆ.

## ಯೂನುಸ್ ಸರ್ಕಾರದಿಂದ ರಾಜಕೀಯ ದ್ವೇಷ – ವಾಜೆದ್ ಕಿಡಿ




ಯುಎಸ್‌ಎ : ಮುಹಮ್ಮದ್ ಯೂನುಸ್ ನೇತೃತ್ವದ ಮಧ್ಯಂತರ ಸರಕಾರವು ನ್ಯಾಯಾಂಗವನ್ನು ಅಸ್ತ್ರವನ್ನಾಗಿಸಿಕೊಂಡು ಅವಾಮಿ ಲೀಗ್ ನಾಯಕರ ವಿರುದ್ಧ ದ್ವೇಷ ಸಾಧನೆ ಮಾಡುತ್ತಿದೆ ಎಂದು ಬಾಂಗ್ಲಾದೇಶದ ಪದಚ್ಯುತ ಪ್ರಧಾನಿ ಶೇಖ್ ಹಸೀನಾ ಅವರ ಪುತ್ರ ಸಜೀಬ್ ವಾಜೆದ್ ಆರೋಪಿಸಿದ್ದಾರೆ. ಹಸೀನಾ ಅವರನ್ನು ಬಾಂಗ್ಲಾದೇಶಕ್ಕೆ ಗಡಿಪಾರು ಮಾಡುವಂತೆ ಕೋರಿ ನವದೆಹಲಿಗೆ ರಾಜತಾಂತ್ರಿಕ ಟಿಪ್ಪಣಿಯನ್ನು ಕಳುಹಿಸಲಾಗಿದೆ ಎಂದು ಅಲ್ಲಿನ ಮಧ್ಯಂತರ ಸರ್ಕಾರ ಹೇಳಿದೆ.

## ಅಫ್ಘಾನಿಸ್ತಾನದ ಮೇಲೆ ಪಾಕಿಸ್ತಾನ ವೈಮಾನಿಕ ದಾಳಿ




ಪಾಕಿಸ್ತಾನ : ಅಫ್ಘಾನಿಸ್ತಾನದಲ್ಲಿ ಪಾಕಿಸ್ತಾನ ವೈಮಾನಿಕ ದಾಳಿ ನಡೆಸಿದೆ. ಪಾಕಿಸ್ತಾನಿ ವಾಯುಪಡೆಯ ಫೈಟರ್ ಜೆಟ್‌ಗಳು ಪಕ್ತಿಕಾ ಪ್ರಾಂತ್ಯದ ಬರ್ಮಾಲ್ ಜಿಲ್ಲೆಯ ಲಾಮನ್ ಸೇರಿದಂತೆ ಏಳು ಗ್ರಾಮಗಳ ಮೇಲೆ ದಾಳಿ ನಡೆಸಿದೆ ಎಂಬ ಮಾಹಿತಿ ಲಭ್ಯವಾಗಿದೆ. ಪಾಕಿಸ್ತಾನಿ ಅಧಿಕಾರಿಗಳು ತಾಲಿಬಾನ್ ತರಬೇತಿ ಶಿಬಿರವನ್ನು ಗುರಿಯಾಗಿಸಿಕೊಂಡು ಈ ದಾಳಿ ನಡೆಸಿದ್ದು, ದಾಳಿಯಲ್ಲಿ ಹಲವಾರು ಭಯೋತ್ಪಾದಕರನ್ನು ಕೊಂದಿದ್ದಾರೆ ಎಂದು ಮಾಹಿತಿ ಬಂದಿದೆ.

## ಬಾಂಗ್ಲಾ ಹಂಗಾಮಿ ಸರ್ಕಾರದ ಜತೆ ಅಮೆರಿಕದ ಮಾತುಕತೆ




ಅಮೆರಿಕ: ಬಾಂಗ್ಲಾದೇಶದಲ್ಲಿ ಹಿಂದೂಗಳ ಮೇಲಿನ ದಾಳಿ ಹೆಚ್ಚುತ್ತಿರುವ ನಡುವೆ, ಬಾಂಗ್ಲಾದೇಶದ ಹಂಗಾಮಿ ಸರ್ಕಾರದ ಮುಖ್ಯ ಸಲಹೆಗಾರ ಮುಹಮ್ಮದ್ ಯೂನುಸ್ ಅವರೊಂದಿಗೆ ಅಮೆರಿಕ ರಾಷ್ಟ್ರೀಯ ಭದ್ರತಾ ಸಲಹೆಗಾರ ಜೇಕ್ ಸುಲ್ಲಿವಾನ್ ಸೋಮವಾರ ಮಾತನಾಡಿದ್ದಾರೆ. ಈ ವೇಳೆ ಉಭಯ ನಾಯಕರು ಬಾಂಗ್ಲಾದೇಶದಲ್ಲಿನ ಎಲ್ಲರ ಮಾನವ ಹಕ್ಕುಗಳನ್ನು ಗೌರವಿಸುವ ಮತ್ತು ರಕ್ಷಿಸುವ ಬದ್ಧತೆಯನ್ನು ವ್ಯಕ್ತಪಡಿಸಿದರು.

## ಇಸ್ರೇಲ್ ಹೌತಿಗಳ ಮೇಲೆ ದಾಳಿ ಮಾಡಲಿದೆ: ನೆತನ್ಯಾಹು




ಜೆರುಸಲೇಂ : ಯೆಮೆನ್‌ನ ಹೌತಿ ಉಗ್ರರ ವಿರುದ್ಧ ಸಂಪೂರ್ಣ ಬಲದಿಂದ ದಾಳಿ ನಡೆಸುವುದಾಗಿ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಎಚ್ಚರಿಕೆ ನೀಡಿದ್ದಾರೆ. ಇಸ್ರೇಲ್‌ನ ಟೆಲ್ ಅವಿವ್ ಮೇಲೆ ಹೌತಿ ಉಗ್ರರು ಕ್ಷಿಪಣಿ ದಾಳಿ ನಡೆಸಿದ ಒಂದು ದಿನದ ನಂತರ ನೆತನ್ಯಾಹು ಈ ಹೇಳಿಕೆ ನೀಡಿದ್ದಾರೆ. ಇರಾನ್ ಮತ್ತು ಅದರ ಮಿತ್ರರಾಷ್ಟ್ರಗಳ ವಿರುದ್ಧ ನಾವು ಪೂರ್ಣ ಬಲದಿಂದ ವರ್ತಿಸಿದಂತೆಯೇ ಹೌತಿಗಳ ವಿರುದ್ಧವೂ ಕ್ರಮ ಕೈಗೊಳ್ಳುತ್ತೇವೆ ಎಂದು ನೆತನ್ಯಾಹು ಹೇಳಿಕೆಯಲ್ಲಿ ತಿಳಿಸಿದ್ದಾರೆ.

## ನೈಜೀರಿಯಾ ಕಾಲ್ತುಳಿತ: 32 ಮಂದಿ ಸಾವು




ನೈಜೀರಿಯಾ : ನೈಜೀರಿಯಾದಲ್ಲಿ ಶನಿವಾರ ನಡೆದ ಎರಡು ಪ್ರತ್ಯೇಕ ಚಾರಿಟಿ ಕಾರ್ಯಕ್ರಮಗಳಲ್ಲಿ ಸಂಭವಿಸಿದ ಕಾಲ್ತುಳಿತದಿಂದ ಕನಿಷ್ಠ 32 ಜನರು ಸಾವನ್ನಪ್ಪಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಆಗ್ನೇಯ ರಾಜ್ಯವಾದ ಅನಂಬ್ರಾದ ಓಕಿಜಾ ಎಂಬ ಪಟ್ಟಣದಲ್ಲಿ ಮೊದಲ ಕಾಲ್ತುಳಿತ ಸಂಭವಿಸಿದ್ದು, 22 ಜನರು ಅಲ್ಲಿ ಪ್ರಾಣ ಕಳೆದುಕೊಂಡಿದ್ದಾರೆ. ಆಹಾರ ಅಗತ್ಯವಿರುವ ಮಹಿಳೆಯರಿಗೆ ಮೂಲ ಸೌಲಭ್ಯವಾದ ಅಕ್ಕಿಯ ಚೀಲಗಳನ್ನು ವಿತರಿಸುವ ಕಾರ್ಯಕ್ರಮವನ್ನು ಆಯೋಜಿಸಲಾಗಿತ್ತು.

## ಅರ್ಚಕನ ಕೈ, ಕಾಲು ಕಟ್ಟಿ ಬರ್ಬರ ಹತ್ಯೆ




ಪಶ್ಚಿಮ ಬಂಗಾಳ: ಬಾಂಗ್ಲಾದೇಶದಲ್ಲಿ ಅಲ್ಪಸಂಖ್ಯಾತ ಹಿಂದೂ ಸಮುದಾಯದವರ ಮೇಲಿನ ದಾಳಿ, ದೌರ್ಜನ್ಯಗಳು ಎಗ್ಗಿಲ್ಲದೆ ಮುಂದುವರಿದಿವೆ. ನಾಟೋರ್ ಎಂಬಲ್ಲಿ ಸ್ಮಶಾನದಲ್ಲಿರುವ ಹಿಂದೂ ದೇಗುಲದ ಅರ್ಚಕರೊಬ್ಬರನ್ನು ಮತಾಂಧರು ಬರ್ಬರವಾಗಿ ಕೊಲೆ ಮಾಡಿದ್ದಾರೆ. ಈ ಘಟನೆಯನ್ನು ಇಸ್ಕಾನ್ ಕೋಲ್ಕತ್ತಾ ಬಲವಾಗಿ ಖಂಡಿಸಿದ್ದು, ಬಾಂಗ್ಲಾದೇಶದ ಮಧ್ಯಂತರ ಸರ್ಕಾರ ಧಾರ್ಮಿಕ ಅಲ್ಪಸಂಖ್ಯಾತರನ್ನು ರಕ್ಷಿಸುವಲ್ಲಿ ವಿಫಲವಾಗಿದೆ ಎಂದು ತೀವ್ರ ಕಳವಳ ವ್ಯಕ್ತಪಡಿಸಿದೆ.

## ಭಾರತ ವಿರೋಧಿ ಕೆನಡಾ ಪ್ರಧಾನಿ ಟ್ರುಡೊಗೆ ಶಾಕ್




ಕೆನಡಾ : ಭಾರತ ವಿರೋಧಿ ನಿಲುವು ತಳೆದಿರುವ ಕೆನಡಾ ಪ್ರಧಾನಿ ಜಸ್ಟಿನ್ ಟ್ರುಡೊಗೆ ಮತ್ತೊಂದು ಶಾಕ್ ಎದುರಾಗಿದೆ. ಪ್ರಮುಖ ಮಿತ್ರಪಕ್ಷ ನ್ಯೂ ಡೆಮಾಕ್ರಟಿಕ್ (ಎನ್‌ಡಿಪಿ) ಸರ್ಕಾರದ ವಿರುದ್ಧ ಮುಂದಿನ ವರ್ಷ ಅವಿಶ್ವಾಸ ನಿರ್ಣಯ ಮಂಡಿಸಲು ನಿರ್ಧರಿಸಿದೆ. ಟ್ರುಡೊರ ಲಿಬರಲ್ ಪಕ್ಷದ ಸರ್ಕಾರಕ್ಕೆ ಬೆಂಬಲ ನೀಡಿ ಕಿಂಗ್ ಮೇಕರ್ ಎನ್ನಿಸಿಕೊಂಡಿದ್ದ ಭಾರತೀಯ ಸಂಜಾತ ಜಗ್ಮೀತ್ ಸಿಂಗ್ ಅವರ ಎನ್‌ಡಿಪಿಯು ಸರ್ಕಾರದಲ್ಲಿ ವಿಶ್ವಾಸ ಕಳೆದುಕೊಂಡಿದೆ. ಹೀಗಾಗಿ, ಸರ್ಕಾರದ ಪತನಕ್ಕೆ ಜಗ್ಮೀತ್ ಸಿಂಗ್ ಕರೆ ನೀಡಿ ಬಹಿರಂಗ ಪತ್ರ ಬರೆದಿದ್ದಾರೆ.

## ಜ.17ರಿಂದ 23ರವರೆಗೆ ಕರ್ನಾಟಕ ಕ್ರೀಡಾಕೂಟ–2025




ಬೆಂಗಳೂರು : 2025ರ ಕರ್ನಾಟಕ ಕ್ರೀಡಾಕೂಟವನ್ನು ಮಂಗಳೂರು ಹಾಗೂ ಉಡುಪಿ ಜಿಲ್ಲೆಗಳಲ್ಲಿ ಆಯೋಜಿಸುತ್ತಿದ್ದು, ವ್ಯವಸ್ಥಿತ ಏರ್ಪಾಡುಗಳನ್ನು ಮಾಡಲು ಮಂಗಳೂರು ಹಾಗೂ ಉಡುಪಿ ಜಿಲ್ಲಾಡಳಿತಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದರು. ಜನವರಿ 17ರಿಂದ 23ರವರೆಗೆ ಮಂಗಳೂರು ಮತ್ತು ಉಡುಪಿ ಜಿಲ್ಲೆಗಳಲ್ಲಿ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಹಾಗೂ ಕರ್ನಾಟಕ ಒಲಂಪಿಕ್ ಸಂಸ್ಥೆ ಮತ್ತು ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲಾಡಳಿತ ಸಹಯೋಗದಲ್ಲಿ ಕ್ರೀಡಾಕೂಟ ಆಯೋಜಿಸಲಾಗುವುದು ಎಂದರು.

## ಸಿ.ಟಿ.ರವಿ ಪ್ರಕರಣದಲ್ಲಿ ಕರ್ತವ್ಯ ಲೋಪ




ಬೆಳಗಾವಿ: ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ಅವರ ಬಂಧನ ವೇಳೆ ಕರ್ತವ್ಯಲೋಪ ಆರೋಪದಡಿ ಖಾನಾಪುರ ಸಿಪಿಐ ಮಂಜುನಾಥ್ ನಾಯ್ಕ ಅವರನ್ನು ಅಮಾನತುಗೊಳಿಸಿ ಐಜಿಪಿ ವಿಕಾಸ್ ಕುಮಾರ್ ವಿಕಾಸ್ ಆದೇಶ ಹೊರಡಿಸಿದ್ದಾರೆ. ಬಿಜೆಪಿ ನಾಯಕರು ಸೇರಿ ಎಲ್ಲರನ್ನೂ ಠಾಣೆಯ ಒಳಗಡೆ ಬಿಟ್ಟಿದ್ದರು. ಮೇಲಾಧಿಕಾರಿಗಳ ಆದೇಶ ಉಲ್ಲಂಘಿಸಿದ ಆರೋಪದಡಿ ಇನ್ಸ್‌ಸ್ಪೆಕ್ಟರನ್ನು ಅಮಾನತು ಮಾಡಲಾಗಿದೆ ಎಂದು ತಿಳಿಸಿದ್ದಾರೆ.

## ಕುವೆಂಪು ವಿವಿಯಲ್ಲಿ ವಿದ್ಯಾರ್ಥಿಗಳಿಗಿಲ್ಲ ನೈಜ ಮಾರ್ಕ್ಸ್ ಕಾರ್ಡ್ !




ಶಿವಮೊಗ್ಗ: ರಾಷ್ಟ್ರಕವಿ ಕುವೆಂಪು ಅವರ ಹೆಸರಿನಲ್ಲಿ ಮಲೆನಾಡಿನ ತಪ್ಪಲಲ್ಲಿ ಇರುವ ಕುವೆಂಪು ವಿಶ್ವವಿದ್ಯಾನಿಲಯ ವ್ಯಾಪ್ತಿಯಲ್ಲಿ ಪದವಿ ಹಾಗೂ ಸ್ನಾತಕೋತ್ತರ ಪದವಿ ಮತ್ತು ದೂರ ಶಿಕ್ಷಣ ಪದವಿ ಮುಗಿಸಿದವರಿಗೆ ಅಂಕಪಟ್ಟಿ ಇನ್ನೂ ಲಭ್ಯವಾಗಿಲ್ಲ. ಅಂಕಪಟ್ಟಿಗಾಗಿ ವಿದ್ಯಾರ್ಥಿಗಳು ಕಾಲೇಜು, ವಿಶ್ವವಿದ್ಯಾನಿಲಯಕ್ಕೆ ಅಲೆದು ಅಲೆದು ಸುಸ್ತಾಗಿದ್ದಾರೆ. ಪದವಿ ಹಾಗೂ ಸ್ನಾತಕೋತ್ತರ ಪದವಿ ಮುಗಿಸಿದ ವಿದ್ಯಾರ್ಥಿಗಳಿಗೆ ವಿಶ್ವವಿದ್ಯಾನಿಲಯವು ಮಾರ್ಕ್ಸ್ ಶೀಟ್ ನೀಡಿದೆ ಎಂದು ವಿದ್ಯಾರ್ಥಿಗಳು ಆರೋಪಿಸುತ್ತಿದ್ದಾರೆ.

## ಬೆಂಬಲ ಬೆಲೆಯಲ್ಲಿ ತೊಗರಿ, ಕಡಲೆ ಖರೀದಿಗೆ ಕೇಂದ್ರ ಅನುಮತಿ

ಬೆಂಗಳೂರು: ರಾಜ್ಯ ಸರ್ಕಾರದ ಮನವಿ ಮೇರೆಗೆ ತೊಗರಿ ಮತ್ತು ಕಡಲೆಯನ್ನು ಬೆಂಬಲ ಬೆಲೆಯಲ್ಲಿ ಖರೀದಿಸಲು ಕೇಂದ್ರ ಸರ್ಕಾರ ಅನುಮತಿ ನೀಡಿದೆ ಎಂದು ಕೃಷಿ ಮಾರುಕಟ್ಟೆ ಸಚಿವ ಶಿವಾನಂದ ಪಾಟೀಲ್ ತಿಳಿಸಿದ್ದಾರೆ. ಪ್ರತಿ ಕ್ವಿಂಟಲ್ ತೊಗರಿಗೆ 7,550 ರೂ ಹಾಗೂ ಕಡಲೆಗೆ 5,650 ರೂ ನಿಗದಿಪಡಿಸಲಾಗಿದೆ. ರಾಜ್ಯದಲ್ಲಿ ತೊಗರಿ ಬೆಳೆಯನ್ನು 15.02 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗುತ್ತಿದ್ದು, ಕಡಲೆಯನ್ನು 10.03 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬೆಳೆಯಲಾಗುತ್ತಿದೆ ಎಂದು ಸಚಿವರು ಹೇಳಿದ್ದಾರೆ.




## ತನಿಖಾ ಸಂಸ್ಥೆಗಳು 'ಡಿಜಿಟಲ್ ಅರೆಸ್ಟ್' ಮಾಡುವುದಿಲ್ಲ

ಬೆಂಗಳೂರು: "ನಮ್ಮ ಕಾನೂನು, ಸಂವಿಧಾನದಲ್ಲಿ ಡಿಜಿಟಲ್ ಅರೆಸ್ಟ್ ಎನ್ನುವ ವಿಧಾನವೇ ಇಲ್ಲ. ಮಹಾರಾಷ್ಟ್ರ, ಮುಂಬೈ ಸೇರಿದಂತೆ ಎಲ್ಲಿಯೂ ಯಾವುದೇ ತನಿಖಾ ಸಂಸ್ಥೆಗಳು ಡಿಜಿಟಲ್ ಅರೆಸ್ಟ್ ಮಾಡುವುದಿಲ್ಲ, ಈ ಕುರಿತು ಜನರಿಗೆ ಸಾಮಾನ್ಯ ಜ್ಞಾನ ಇರಬೇಕು" ಎಂದು




ಬೆಂಗಳೂರು ನಗರ ಪೊಲೀಸ್ ಆಯುಕ್ತ ಬಿ.ದಯಾನಂದ್ ತಿಳಿಸಿದ್ದಾರೆ. ದೇಶದಲ್ಲಿ ಇತ್ತೀಚಿನ ದಿನಗಳಲ್ಲಿ ಡಿಜಿಟಲ್ ಅರೆಸ್ಟ್ ಪ್ರಕರಣಗಳಿಂದ ಅಮಾಯಕರು ಹಣ ಕಳೆದುಕೊಳ್ಳುತ್ತಿರುವುದರ ಕುರಿತು ಪೊಲೀಸ್ ಆಯುಕ್ತರು ಪ್ರತಿಕ್ರಿಯಿಸಿದರು.

## ಗುತ್ತಿಗೆ ಆಧಾರದ ಸಿಬ್ಬಂದಿಯ ಸಂಚಿತ ವೇತನ ಪರಿಷ್ಕರಣೆ



ಬೆಂಗಳೂರು: ಮುಖ್ಯಮಂತ್ರಿ, ಉಪಮುಖ್ಯಮಂತ್ರಿ, ಸಚಿವರು, ವಿಧಾನಸಭೆ, ವಿಧಾನಪರಿಷತ್, ಲೋಕಸಭೆ ಮತ್ತು ರಾಜ್ಯಸಭೆ ಸದಸ್ಯರ ಆಪ್ತ ಸಿಬ್ಬಂದಿ ಕಾರ್ಯಾಲಯ ಸೇರಿದಂತೆ ವಿವಿಧ ಸಚಿವಾಲಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಗುತ್ತಿಗೆ ಆಧಾರದ ಸಿಬ್ಬಂದಿಯ ಸಂಚಿತ ವೇತನವನ್ನು ಪರಿಷ್ಕರಿಸಿ ರಾಜ್ಯ ಸರ್ಕಾರ ಆದೇಶ ಹೊರಡಿಸಿದೆ. 7ನೇ ವೇತನ ಆಯೋಗದ ಶಿಫಾರಸ್ಸಿನ ಮೇರೆಗೆ ರಾಜ್ಯ ಸರ್ಕಾರ ಜಾರಿಗೆ ತಂದಿದ್ದು, ಗುತ್ತಿಗೆ ಆಧಾರದ ಸಿಬ್ಬಂದಿಯ ಪರಿಷ್ಕೃತ ಸಂಚಿತ ವೇತನ ನ.1 ರಿಂದ ಜಾರಿಗೆ ಬಂದಿದೆ.

## ಕೂಡಲಸಂಗಮದಿಂದ ಪಂಚಮಸಾಲಿ ಪ್ರತಿಜ್ಞಾ ಕ್ರಾಂತಿ ಅಭಿಯಾನ




ಬೆಳಗಾವಿ: "ನಮ್ಮ ಪಂಚಮಸಾಲಿ ಮೀಸಲಾತಿ ಹೋರಾಟವನ್ನು ಮತ್ತಷ್ಟು ಗಟ್ಟಿಗೊಳಿಸಲು ಹಾಗೂ ಸರ್ಕಾರದ ದೌರ್ಜನ್ಯ ನೀತಿಯ ವಿರುದ್ಧ ಜನರನ್ನು ಜಾಗೃತಿಗೊಳಿಸಲು, ರಾಜ್ಯದ ಪ್ರತೀ ಗ್ರಾಮಗಳಿಗೂ ಭೇಟಿ ನೀಡುವ ಉದ್ದೇಶದಿಂದ ಪಂಚಮಸಾಲಿ ಪ್ರತಿಜ್ಞಾ ಕ್ರಾಂತಿ ಅಭಿಯಾನ ಜ.14ರಂದು ಕೂಡಲಸಂಗಮದಿಂದ ಆರಂಭಿಸಲಾಗುತ್ತದೆ, ಬಳಿಕ ಪಂಚಮಸಾಲಿ ಹೋರಾಟದ ಮುಂದಿನ ರೂಪುರೇಷೆಗಳನ್ನು ಸಿದ್ಧಪಡಿಸಲಾಗುವುದು" ಎಂದು ಬಸವಜಯ ಮೃತ್ಯುಂಜಯ ಸ್ವಾಮೀಜಿ ಹೇಳಿದರು.

## ನೌಕರರನ್ನು ವರ್ಗಾವಣೆ ಮಾಡಿದರೆ ಶಿಸ್ತು ಕ್ರಮ

ಬೆಂಗಳೂರು: ಸರ್ಕಾರಿ ನೌಕರರ ವರ್ಗಾವಣಾ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸರ್ಕಾರ ಆದೇಶ ಹೊರಡಿಸಿದೆ. ಸಿಎಂ ಅನುಮೋದನೆ ಪಡೆಯದೇ ವರ್ಗಾವಣೆ ಮಾಡಿದರೆ ಶಿಸ್ತು ಕ್ರಮ ಕೈಗೊಳ್ಳುವುದಾಗಿ ಸೂಚನೆ ನೀಡಿದೆ. ನಿರ್ದಿಷ್ಟ ಪ್ರಕರಣದಲ್ಲಿ ವರ್ಗಾವಣೆ ಅವಶ್ಯಕ ಎನಿಸಿದ್ದಲ್ಲಿ ಅಂಥ ಪ್ರಕರಣಗಳನ್ನು ಚಾಚೂತಪ್ಪದೇ ಮುಖ್ಯಮಂತ್ರಿಯವರಿಗೆ ಸಲ್ಲಿಸಿ, ಅನುಮೋದನೆ ಪಡೆದು ವರ್ಗಾವಣೆ ಮಾಡಬೇಕು ಎಂದು ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ ಹೊರಡಿಸಿದ ಆದೇಶದಲ್ಲಿ ತಿಳಿಸಿದೆ.




## ನಿತೀಶ್ ಕುಮಾರ್‌ಗೆ 'ಭಾರತ ರತ್ನ' ಪ್ರಶಸ್ತಿಗೆ ಒತ್ತಾಯ




ಪಾಟ್ನಾ: ಬಿಹಾರ ಮುಖ್ಯಮಂತ್ರಿ ನಿತೀಶ್ ಕುಮಾರ್ ಮತ್ತು ಒಡಿಶಾದ ಮಾಜಿ ಮುಖ್ಯಮಂತ್ರಿ ನವೀನ್ ಪಟ್ನಾಯಕ್ ಅವರಿಗೆ ದೇಶದ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ 'ಭಾರತ ರತ್ನ' ನೀಡಬೇಕೆಂದು ಕೇಂದ್ರ ಸಚಿವ ಗಿರಿರಾಜ್ ಸಿಂಗ್ ಒತ್ತಾಯಿಸಿದ್ದಾರೆ. ಬೇಗುಸರಾಯ್‌ನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಿಂಗ್, ಇಬ್ಬರೂ ನಾಯಕರು ತಮ್ಮ ತಮ್ಮ ರಾಜ್ಯಗಳಿಗೆ ನೀಡಿದ ಮಹತ್ವದ ಕೊಡುಗೆಗಳನ್ನು ಉಲ್ಲೇಖಿಸಿದರು.

## ಕೆನ್–ಬೆಟ್ವಾ ನದಿ ಜೋಡಣೆಗೆ ಪ್ರಧಾನಿ ಮೋದಿ ಶಂಕುಸ್ಥಾಪನೆ



ಮಧ್ಯ ಪ್ರದೇಶ: ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆ ಯೋಜನೆಗಳಲ್ಲಿ ಒಂದಾದ ನದಿ ಜೋಡಣೆಯ ಮೊದಲ ಯೋಜನೆಗೆ ಪ್ರಧಾನಿ ನರೇಂದ್ರ ಮೋದಿ ಅವರು ಮಧ್ಯ ಪ್ರದೇಶದ ಖಜುರಾಹೋದಲ್ಲಿ ಶಂಕುಸ್ಥಾಪನೆ ನೆರವೇರಿಸಿದ್ದಾರೆ. ಮಧ್ಯ ಪ್ರದೇಶದಲ್ಲಿ ಹುಟ್ಟುವ ಎರಡು ನದಿಗಳಾದ ಕೆನ್ ಮತ್ತು ಬೆಟ್ವಾ ನದಿಗಳನ್ನು ಜೋಡಿಸಿ, ಅದರ ನೀರನ್ನು ಮಧ್ಯ ಪ್ರದೇಶ ಮತ್ತು ಉತ್ತರ ಪ್ರದೇಶದ ಜನರಿಗೆ ನೀಡುವುದು ಯೋಜನೆಯ ಉದ್ದೇಶ. ಈ ಮೂಲಕ ಅತಿದೊಡ್ಡ ಸಾಹಸಕ್ಕೆ ಸರ್ಕಾರ ನಾಂದಿ ಹಾಡಿದೆ.

## ಬಂಗಾಳಕೊಲ್ಲಿಯಲ್ಲಿ ಮತ್ತೆ ವಾಯುಭಾರ ಕುಸಿತ

ಆಂಧ್ರಪ್ರದೇಶ: ಪಶ್ಚಿಮ ಮಧ್ಯ ಬಂಗಾಳ ಕೊಲ್ಲಿಯಲ್ಲಿ ಕಡಿಮೆ ಒತ್ತಡ ವಾತಾವರಣ ಮುಂದುವರಿದಿದೆ. ಉತ್ತರ ತಮಿಳುನಾಡು ಮತ್ತು ಆಂಧ್ರದ ದಕ್ಷಿಣ ಕರಾವಳಿಯಲ್ಲಿ ಉಂಟಾಗಿರುವ ಕಡಿಮೆ ಒತ್ತಡ ದುರ್ಬಲಗೊಂಡು ಮಳೆಯಾಗುವ ಸಾಧ್ಯತೆಯಿದೆ




ಎಂದು ಹವಾಮಾನ ಅಧಿಕಾರಿಗಳು ತಿಳಿಸಿದ್ದಾರೆ. ಇದರ ಪರಿಣಾಮ ಕರಾವಳಿ ಆಂಧ್ರದಲ್ಲಿ ಲಘು ಮಳೆಯಾಗುವ ಸಾಧ್ಯತೆ ಇದೆ. ತಿರುಪತಿ ಮತ್ತು ನೆಲ್ಲೂರು ಜಿಲ್ಲೆಗಳಲ್ಲಿ ಭಾರಿ ಮಳೆಯಾಗುವ ಸಾಧ್ಯತೆ ಇದೆ ಎಂದು ಹವಾಮಾನ ಇಲಾಖೆ ತಿಳಿಸಿದೆ.

## ಚುನಾವಣೆಯಲ್ಲಿ ಅಕ್ರಮ ಆರೋಪ : ಕಾಂಗ್ರೆಸ್‌ಗೆ ಇಸಿ ಸ್ಪಷ್ಟನೆ

ನವದೆಹಲಿ: ಮಹಾರಾಷ್ಟ್ರ ವಿಧಾನಸಭೆ ಚುನಾವಣೆಯಲ್ಲಿ ಮತದಾನದ ಅಂಕಿ ಅಂಶಗಳಲ್ಲಿ ವ್ಯತ್ಯಾಸ ಹಾಗೂ ಸೇರ್ಪಡೆಯಲ್ಲಿ ಗೋಲ್‌ಮಾಲ್ ನಡೆದಿದೆ ಎಂಬ ಕಾಂಗ್ರೆಸ್‌ನ ಆರೋಪಕ್ಕೆ ಕೇಂದ್ರ ಚುನಾವಣಾ ಆಯೋಗ ಸವಿಸ್ತಾರವಾದ ಸ್ಪಷ್ಟನೆಯನ್ನು ನೀಡಿದೆ. ಕಾಂಗ್ರೆಸ್ ಮಾಡುತ್ತಿರುವ ಆರೋಪಗಳು ಮತದಾರರಿಗೆ ತಪ್ಪು ಮಾಹಿತಿ ನೀಡುತ್ತಿದೆ ಚಲಾವಣೆಯಾದ ಮತದಾನದ ಪ್ರಮಾಣವನ್ನು ಬದಲಾಯಿಸುವುದು ಅಸಾಧ್ಯ ಎಂದು ಚುನಾವಣಾ ಆಯೋಗ ಸ್ಪಷ್ಟವಾಗಿ ಹೇಳಿದೆ.




## ಬುರ್ಖಾ ಧರಿಸಿ ವಾದ ಮಾಡುವಂತಿಲ್ಲ: ಹೈಕೋರ್ಟ್

ಶ್ರೀನಗರ: ಬಾರ್ ಕೌನ್ಸಿಲ್ ಆಫ್ ಇಂಡಿಯಾದ ವಸ್ತ್ರ ಸಂಹಿತೆ ನಿಯಮಗಳ ಪ್ರಕಾರ ಮಹಿಳಾ ವಕೀಲರು ಬುರ್ಖಾ ಧರಿಸಿ ನ್ಯಾಯಾಲಯದ ಕಲಾಪಗಳಲ್ಲಿ ಭಾಗವಹಿಸುವಂತಿಲ್ಲ ಎಂದು ಜಮ್ಮು–ಕಾಶ್ಮೀರ ಮತ್ತು ಲಡಾಖ್ ಹೈಕೋರ್ಟ್ ಆದೇಶಿಸಿದೆ. ಮಹಿಳಾ ವಕೀಲರೊಬ್ಬರು ಬುರ್ಖಾ ತೆಗೆಯಲು ನಿರಾಕರಿಸಿದ್ದರಿಂದ ಮಹಿಳಾ ವಕೀಲರ ಗುರುತು ಖಾತರಿಪಡಿಸಿಕೊಳ್ಳಲು ಸಾಧ್ಯವಾಗದ್ದರಿಂದ ನ್ಯಾಯಾಲಯ ಆಕೆ ವಾದಮಂಡನೆ ಮಾಡದಂತೆ ನಿರ್ಬಂಧಿಸಿತು.




## ಸಂಭಾಲ್‌ನಲ್ಲಿ ಮತ್ತೊಂದು ಪುರಾತನ ಬಾವಿ ಪತ್ತೆ




ಉತ್ತರ ಪ್ರದೇಶ : ಉತ್ತರ ಪ್ರದೇಶದ ಸಂಭಾಲ್‌ನಲ್ಲಿ ನಡೆಯುತ್ತಿರುವ ಉತ್ಖನನವು ಭೂಗರ್ಭದಲ್ಲಿ ಹುದುಗಿ ಹೋಗಿರುವ ಐತಿಹಾಸಿಕ ಧಾರ್ಮಿಕ ರಹಸ್ಯಗಳು ಒಂದೊಂದಾಗಿ ಹೊರಬರುತ್ತಿವೆ. ಯಾತ್ರಾರ್ಥಿಗಳ ತೀರ್ಥಗಂಗೆ' ಎಂದೇ ಕರೆಯಲ್ಪಡುವ ಮುಚ್ಚಲ್ಪಟ್ಟಿದ್ದ ಮತ್ತೊಂದು ಬಾವಿ ಪತ್ತೆಯಾಗಿದೆ. ಶಹಜಾದಿ ಸರ್ಸೈ ಪ್ರದೇಶದಲ್ಲಿ ಪುರಾತತ್ವ ಇಲಾಖೆ ನಡೆಸುತ್ತಿರುವ ಉತ್ಖನನದಲ್ಲಿ ಪುರಾತನವಾದ ಶುದ್ಧ ನೀರಿನ ಬಾವಿ ಸಿಕ್ಕಿದೆ. ಇದರ ಪುನರುಜ್ಜೀವನ ಕಾರ್ಯ ನಡೆಯುತ್ತಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

# ಕರಾವಳಿ ತರಂಗಿಣಿ ಸಿನಿ ತರಂಗಿಣಿ

## ಹಲವು ಗಣ್ಯರ ಉಪಸ್ಥಿತಿಯಲ್ಲಿ 'ಕ್ಯಾಪಿಟಲ್ ಸಿಟಿ'



ಇಪ್ಪತ್ತಕ್ಕೂ ಅಧಿಕ ಸಮಾನ ಮನಸ್ಕರು ಆರಂಭಿಸಿರುವ ಇನಿಫಿನಿಟಿ ಕ್ರಿಯೇಷನ್ಸ್ ಸಂಸ್ಥೆ ಲಾಂಛನದಲ್ಲಿ ನಿರ್ಮಾಣವಾಗಿರುವ, ಆರ್ ಅನಂತ ರಾಜು ನಿರ್ದೇಶನದ, ರಾಜೀವ್ ರೆಡ್ಡಿ ನಾಯಕನಾಗಿ ನಟಿಸಿರುವ "ಕ್ಯಾಪಿಟಲ್ ಸಿಟಿ" ಚಿತ್ರದ ಹಾಡುಗಳನ್ನು ಜಯನಗರ ವಿಧಾನಸಭಾ ಸದಸ್ಯರಾದ ಸಿ.ಕೆ.ರಾಮಮೂರ್ತಿ, ಬಿಜೆಪಿ ಮುಖಂಡರಾದ ರೇಣುಕಾಚಾರ್ಯ ಅನಾವರಣ ಮಾಡಿದರು. ಶಿವಗಂಗೆಯ ಶ್ರೀಮಲಯ ಶಾಂತ ಮುನಿ ಸ್ವಾಮಿಗಳು ಹಾಗೂ ಶ್ರೀ ಆದಿತ್ಯ ಸ್ವಾಮಿಗಳು ಕನ್ನಡ ಚಲನಚಿತ್ರ ನಿರ್ಮಾಪಕರ ಸಂಘದ ಅಧ್ಯಕ್ಷ ಉಮೇಶ್ ಬಣಕಾರ್, ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಮಾಜಿ ಅಧ್ಯಕ್ಷ ಭಾ.ಮ.ಹರೀಶ್ ಹಾಗೂ ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘದ ಅಧ್ಯಕ್ಷ ಎನ್ನಾರ್ ಕೆ ವಿಶ್ವಾನಾಥ್, ನಿರ್ಮಾಪಕರಾದ ರಮೇಶ್ ರೆಡ್ಡಿ ಮುಂತಾದ ಗಣ್ಯರು ಉಪಸ್ಥಿತರಿದ್ದರು.

## ವಾಣಿಜ್ಯ ಮಂಡಳಿಯಿಂದ ಮುಖ್ಯಮಂತ್ರಿಗಳ ಭೇಟಿ..



ಇತ್ತೀಚಿಗೆ ನಡೆದ ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಚುನಾವಣೆಯಲ್ಲಿ ವಿಜೇತರಾದ ಅಧ್ಯಕ್ಷ ಎಂ.ನರಸಿಂಹಲು, ಉಪಾಧ್ಯಕ್ಷರಾದ ಕೆ.ವಿ.ವೆಂಕಟೇಶ್, ಶಿಲ್ಪ ಶ್ರೀನಿವಾಸ್, ಕೆ.ಓ.ರಂಗಪ್ಪ, ಗೌರವ ಕಾರ್ಯದರ್ಶಿಗಳಾದ ಡಿ.ಕೆ.ರಾಮಕೃಷ್ಣ, ಎಂ.ಎನ್.ಕುಮಾರ್, ಎಲ್ ಸಿ ಕುಶಾಲ್ ಹಾಗೂ ಖಜಾಂಚಿ ಬಿ. ಮಹದೇವ್ ಅವರು ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಮಾಜಿ ಅಧ್ಯಕ್ಷರು, ಕನ್ನಡಪರ ಹೋರಾಟಗಾರರಾದ ಸಾ.ರಾ. ಗೋವಿಂದು ಅವರ ನೇತೃತ್ವದಲ್ಲಿ ಸನ್ಮಾನ್ಯ ಮುಖ್ಯಮಂತ್ರಿ ಶ್ರೀ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಚಿತ್ರರಂಗದ ಕೆಲವು ಸಮಸ್ಯೆಗಳ ಬಗ್ಗೆ ಚರ್ಚಿಸಿದರು. ಚಿತ್ರ ರಂಗದ ಹೆಚ್ಚಿನ ವಿಷಯಗಳ ಬಗ್ಗೆ ಚರ್ಚಿಸುವ ಸಲುವಾಗಿ ಸಮಯಾವಕಾಶವನ್ನು ನೀಡಬೇಕೆಂದು ವಾಣಿಜ್ಯ ಮಂಡಳಿ ಪದಾಧಿಕಾರಿಗಳು ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಿದರು.

## FIR 6to6 ಆಡಿಯೋ, ಟ್ರೈಲರ್ ರಿಲೀಸ್..



ಚಿನ್ನಾರಿ ಮುತ್ತ ವಿಜಯ ರಾಘವೇಂದ್ರ ಅಭಿನಯದ ಕುತೂಹಲಕಾರಿ ಥ್ರಿಲ್ಲರ್ ಚಿತ್ರ 'ಎಫ್.ಐ.ಆರ್. 6ಟು6' ಬಿಡುಗಡೆಗೆ ಸಿದ್ಧವಾಗಿದೆ. ಈ ಹಿಂದೆ ಪಟ್ಟಾಭಿಷೇಕ ಎಂಬ ಚಿತ್ರವನ್ನು ನಿರ್ಮಿಸಿದ್ದ ಭಾಗ್ಯ ರಮೇಶ್ ಅವರು ಈ ಚಿತ್ರವನ್ನು ನಿರ್ಮಾಣ ಮಾಡಿದ್ದಾರೆ. ಕೆ.ವಿ. ರಮಣರಾಜ್ ಅವರು ಈ ಚಿತ್ರಕ್ಕೆ ಆಕ್ಷನ್ ಕಟ್ ಹೇಳಿದ್ದಾರೆ. ಓಂಜಿ ಅವರ ಕ್ಯಾಮೆರಾ ವರ್ಕ್ ಚಿತ್ರಕ್ಕಿದೆ. ಸತೀಶ್ ಬಾಬು ಹಾಗೂ ಎಂ.ಎಸ್. ತ್ಯಾಗರಾಜ್ ಸಂಗೀತ ಸಂಯೋಜನೆ ಮಾಡಿರುವ ಈ ಚಿತ್ರದ ಟ್ರೈಲರ್ ಹಾಗೂ ಆಡಿಯೋ ಬಿಡುಗಡೆ ಸಮಾರಂಭ ಇತ್ತೀಚೆಗೆ ನೆರವೇರಿತು. ಫಿಲಂ ಚೇಂಬರ್ ಉಪಾಧ್ಯಕ್ಷ ಶಿಲ್ಪಾ ಶ್ರೀನಿವಾಸ್, ಹಿರಿಯ ನಿರ್ದೇಶಕ ಕೂಡ್ಲು ರಾಮಕೃಷ್ಣ ಮುಖ್ಯ ಅತಿಥಿಗಳಾಗಿ ಆಗಮಿಸಿದ್ದರು. ಟ್ರೈಲರ್ ಪ್ರದರ್ಶನದ ನಂತರ ನಡೆದ ಪತ್ರಿಕಾ ಗೋಷ್ಠಿಯಲ್ಲಿ ಚಿತ್ರದ ಕುರಿತಂತೆ ಮಾಹಿತಿ ಹಂಚಿಕೊಂಡರು. ಈ ಚಿತ್ರದಲ್ಲಿ ಸಿರಿರಾಜ್, ಸ್ವಾತಿ, ಯಶಾ ಶೆಟ್ಟಿ ಹೀಗೆ ಮೂವರು ನಾಯಕಿಯರಿದ್ದಾರೆ.

## ಕರಾವಳಿ ಪ್ರತಿಭೆಗಳು ನಿರ್ಮಿಸಿರುವ 'ಕುಡ್ಲ ನಮ್ದೂರು'

ದಕ್ಷಿಣ ಕನ್ನಡ ಜಿಲ್ಲೆಯ ಕಡಲತಡಿಯ ಪ್ರತಿಭೆಗಳೇ ಸೇರಿ ನಿರ್ಮಿಸಿರುವ 'ಕುಡ್ಲ ನಮ್ದು ಊರು' ಸಿನೆಮಾ ತೆರೆಗೆ ಬರಲು ರಡಿಯಾಗ್ತಿದೆ. ಸದ್ಯ ಅಂತಿಮ ಹಂತದ ಪೋಸ್ಟ್ ಪ್ರೊಡಕ್ಷನ್ ಕೆಲಸಗಳಲ್ಲಿ ನಿರತವಾಗಿರುವ ಚಿತ್ರತಂಡ ಇದೀಗ ಸಿನೆಮಾದ ಟ್ರೇಲರ್ ಮತ್ತು ಆಡಿಯೋವನ್ನು ಕರ್ನಾಟಕ ಚಲನಚಿತ್ರ ವಾಣಿಜ್ಯ ಮಂಡಳಿ ಮಾಜಿ ಅಧ್ಯಕ್ಷ ಭಾ. ಮ. ಹರೀಶ್, ಕನ್ನಡ ಚಲನಚಿತ್ರ ನಿರ್ಮಾಪಕರ ಸಂಘದ ಅಧ್ಯಕ್ಷ ಉಮೇಶ್ ಬಣಕಾರ್, ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘದ ಅಧ್ಯಕ್ಷ ಎನ್ನಾರ್ ಕೆ. ವಿಶ್ವನಾಥ್, ನಟ ಚೇತನ್ ರಾಜ್ ಮುಂತಾದ ಗಣ್ಯರು ಸಮಾರಂಭದಲ್ಲಿ ಹಾಜರಿದ್ದು, 'ಕುಡ್ಲ ನಮ್ದು ಊರು' ಸಿನೆಮಾದ ಟ್ರೇಲರ್ ಮತ್ತು ಹಾಡುಗಳನ್ನು ಬಿಡುಗಡೆಗೊಳಿಸಿ ಚಿತ್ರತಂಡಕ್ಕೆ ಶುಭ ಹಾರೈಸಿದರು. ಕೃತಾರ್ಥ ಪ್ರೊಡಕ್ಷನ್ ಬ್ಯಾನರಿನಲ್ಲಿ ನಿರ್ಮಾಣವಾಗಿರುವ ದುರ್ಗಾಪ್ರಸಾದ್ (ಅಲೋಕ್) ಮತ್ತು ಆರ್ಯ ಡಿ. ಕೆ ಜಂಟಿಯಾಗಿ ನಿರ್ದೇಶನ ಮಾಡಿದ್ದಾರೆ.











Edited, Published, Printed by Lalita Kumari (Lalithasri Preetham Rai) Shop N0: 6, Lingamma Towers. Opp. Pandeshwar police station, Pandeshwar Mangaluru 575001. Dakshina Kannada.
All Rights Reserved RNI Ref: 1327299/KARKAN26532. Printed @ N R K Media World, No-10, 'A' 1st floor, 4th cross, 4th main, Gandhinagar Bengaluru-560009. email: karavalitharangini@gmail.com PH: +91 9880109212